# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 227 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 26–03–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 01 Issue - 227 | Title- Code: KARKAN 28269 | Chitradurga | Date: 26-03-2024 Tuesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಇಂದು ನಾಯಕನಹಟ್ಟಿ ಗುರುತಿಪ್ಪೇರುದ್ರಸ್ವಾಮಿ ದೊಡ್ಡರಥೋತ್ಸವ 2

ಸುಗಮವಾಗಿ ನಡೆದ ಎಸ್.ಎಸ್.ಎಲ್.ಸಿ ಪರೀಕ್ಷೆ, 20856 ವಿದ್ಯಾರ್ಥಿಗಳು ಹಾಜರು 3

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಬಿ.ಎನ್.ಚಂದ್ರಪ್ಪಗೆ ಅದ್ದೂರಿ ಸ್ವಾಗತ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಲೋಕಸಭೆ ಚುನಾವಣೆಗೆ ಹೆಚ್ಚಿನ ಮತ ಕೊಡಿಸುವ ಮೂಲಕ

# ಕಾಂಗ್ರೆಸ್ ಅಭ್ಯರ್ಥಿ ಗೆಲ್ಲಿಸೋಣ

### ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಮತ್ತು ಶಾಸಕ ಶ್ರೀ ಟಿ .ರಘುಮೂರ್ತಿ ಕರೆ

» ನಮ್ಮಜನ ಸಮಾಚಾರ

ಚಳ್ಳಕೆರೆ: ಚಳ್ಳಕೆರೆ ವಿಧಾನ ಸಭಾ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಬಿ.ಎನ್. ಚಂದ್ರಪ್ಪ ಅವರಿಗೆ ಅತಿ ಹೆಚ್ಚ ಲೀಡ್ ನೀಡುವ ಮೂಲಕ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿ ಗೆಲ್ಲಿಸೋಣ ಎಂದು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಮತ್ತು ಶಾಸಕ ಶ್ರೀ ಟಿ .ರಘುಮೂರ್ತಿ ಕರೆ ನೀಡಿದರು.

ಚಳ್ಳಕೆರೆ ನಗರದ ಚೇಂಬರ್ ಆಫ್ ಕಾಮರ್ಸ್ ಕಲ್ಯಾಣ ಮಂಟಪದಲ್ಲಿ ನಡೆದ ಭೂತ್ ಮಟ್ಟದ ಏಜೆಂಟ್ ಗಳ ಒಂದು ದಿನದ ಕಾರ್ಯಾಗಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

2023 ರ ವಿಧಾನ ಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ನೀಡಿದ ಐದು ಗ್ಯಾರೆಂಟಿಗಳನ್ನು ಜಾರಿಗೊಳಿಸುವ ಮೂಲಕ ನುಡಿದಂತೆ ನಡೆದಿದ್ದೇವೆ. ವಿರೋಧ ಪಕ್ಷಗಳು ಈ ಮೊದಲು ಗ್ಯಾರೆಂಟಿ ಜಾರಿ ಮಾಡಲು ಆಗುವುದಿಲ್ಲ ಎಂದು ಗೇಲಿ ಮಾಡುತ್ತಿದ್ದರು ಆದರೆ ನಾವು ಜಾರಿ ಮಾಡುವ ವಿರೋಧ ಪಕ್ಷಗಳಿಗೆ ಉತ್ತರ ನೀಡುವ ಕೆಲಸ ಮಾಡಿದ್ದೇವೆ. ನಮ್ಮ ಕಾಂಗ್ರೆಸ್ ಪಕ್ಷದ ಉದ್ದೇಶ ಅಭಿವೃದ್ಧಿ ಜೊತೆಗೆ ಗ್ಯಾರೆಂಟಿ ಜಾರಿ ಮಾಡಿದ್ದೇವೆ.ಪ್ರತಿಯೊಬ್ಬ ಕಾರ್ಯಕರ್ತರು ನಮ್ಮ ಕಾಂಗ್ರೆಸ್ ಪಕ್ಷದ ಐದು ಗ್ಯಾರೆಂಟಿಗಳನ್ನು ಜನರಿಗೆ ತಲುಪಿಸ ಲೋಕಸಭೆ ಚುನಾವಣೆಯಲ್ಲಿ ಮತ ಕೇಳುವ ಕೆಲಸವನ್ನು ನಾವೆಲ್ಲರೂ ಮಾಡಬೇಕಾಗಿದೆ. ಪ್ರತಿ ಬೂತ ಮಟ್ಟದಲ್ಲಿ ಪಕ್ಷವನ್ನು ಬಲಪಡಿಸುವ ಜೊತೆಗೆ ಲೀಡ್ ಪಡೆಯಬೇಕಾಗಿದೆ. ವಿರೋಧ ಪಕ್ಷಗಳಿಗೆ ಕಾಂಗ್ರೆಸ್ ಪಕ್ಷವನ್ನು ಟೀಕೆ ಮಾಡುವುದು ಬಿಟ್ಟು ಬೇರೆ ಕೆಲಸವಿಲ್ಲದಾಗಿದೆ. ನಮ್ಮ ಗ್ಯಾರೆಂಟಿ ಯೋಜನೆಗಳು ಮನೆ ಮಾತಾಗಿದ್ದು ಜನರು ಈ ಯೋಜನೆಗಳ ಬಗ್ಗೆ ಮಾತನಾಡುತ್ತಿದ್ದು ಬಿಜೆಪಿ ಅವರಿಗೆ ಸಹಿಸಿಕೊಳ್ಳಲು ಆಗುತ್ತಿಲ್ಲ ಎಂದರು.





ನನ್ನನ್ನು ಮೂರು ಬಾರಿ ಗೆಲ್ಲಿಸಿ ಶಾಸಕನನ್ನಾಗಿ ಆಯ್ಕೆ ಮಾಡಿರುವುದಕ್ಕೆ ನಾನು ನಿಮಗೆಲ್ಲ ಋಣಿಯಾಗಿದ್ದೇನೆ. ಅದರಂತೆ ಲೋಕಸಭೆ ಚುನಾವಣೆಯಲ್ಲಿ ಅತಿ ಹೆಚ್ಚು ಮತಗಳನ್ನು ಚಳ್ಳಕೆರೆ ಕಾಂಗ್ರೆಸ್ ಪಕ್ಷರ ಭದ್ರಕೋಟೆ ಎಂಬುದನ್ನು ಮತ್ತೊಮ್ಮೆ ಸಾಬೀತುಪಡಿಸಿ ಎಂದು ಕಾರ್ಯಕರ್ತರಿಗೆ ಉತ್ಸಾಹ ತುಂಬಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಎಂ.ಕೆ.ತಾಜ್ ಪೀರ್, ರಾಮನಗರ ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ದೀಪಾ ಗೌಡ, ಕೆ.ಪಿ.ಸಿ.ಸಿ. ಸದಸ್ಯ ಅಮೃತೇಶ್ವರ, ಮಾಜಿ ಜಿಲ್ಲಾ ಪಂಚಾಯತ್ ಅಧ್ಯಕ್ಷ ರವಿಕುಮಾರ್, ಮಾಜಿ ಜಿ.ಪಂ ಸದಸ್ಯ ಪ್ರಕಾಶ್ ಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ವೀರಭದ್ರಪ್ಪ, ಶಶಿಧರ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಗೀತಾ ಬಾಯಿ, ಹಿರಿಯ ಮುಖಂಡರಾದ ಪ್ರಭುದೇವ್, ಸೈಯದ್, ತಿಪ್ಪೇಸ್ವಾಮಿ, ನಗರಸಭೆ ಸದಸ್ಯರುಗಳು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಪದಾಧಿಕಾರಿಗಳು, ಭೂತ್ ಮಟ್ಟದ ಏಜೆಂಟ್ ಗಳು, ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಕುಡಿಯುವ ನೀರಿನ ಸರಬರಾಜಿನಲ್ಲಿ ವ್ಯತ್ಯಯ

» ಚಿತ್ರದುರ್ಗ

ನಗರಕ್ಕೆ ನೀರು ಸರಬರಾಜು ಮಾಡುವ ವಾಣಿ ವಿಲಾಸ ಸಾಗರ ಯೋಜನೆಯ ಮುಖ್ಯ ಕೊಳವೆ ಮಾರ್ಗದ ಸಿ.ಐ. ಮತ್ತು ಎಂ.ಎಸ್. ಮಾದರಿ ಪೈಪ್‌ಲೈನ್‌ಗಳದುರಸ್ಥಿಕಾರ್ಯಕೈಗೊಳ್ಳಬೇಕಾಗಿದೆ. ಆದ್ದರಿಂದ ಮಾರ್ಚ್ 26 ಮತ್ತು ಮಾಚ್ 27 ರಂದು ನಗರದ 30 ರಿಂದ 35 ವರಗಿನ ವಾರ್ಡ್‌ಗಳಲ್ಲಿ ಕುಡಿಯುವ ನೀರಿನ ಸರಬರಾಜಿಲ್ಲಿ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು ಸಹಕರಿಸುವುದರೊಂದಿಗೆ ನೀರಿನ್ನು ಮಿತವಾಗಿ ಬಳಸುವಂತೆ ನಗರ ಸಭೆ ಆಯುಕ್ತೆ ರೇಣುಕಾ.ಎಂ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಕ್ರಮ ಮದ್ಯ ಮಾರಾಟ: ರಾಮ್‌ಜೀಹಟ್ಟಿಯ ಪಾಲ್ಲುಣನಾಯ್ಕ, ಬೈಕ್ ಜಪ್ತಿ



» ಚಳ್ಳಕೆರೆ

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಅಬಕಾರಿ ಅಧಿಕಾರಿಗಳ ತಂಡ ಕಾನೂನು ಬಾಹಿರವಾಗಿ ಖಾಸಗಿ ಅಂಗಡಿಗಳಲ್ಲಿ ಅಕ್ರಮ ಮದ್ಯ ಮಾರಾಟವನ್ನು ತಡೆಯುವ ನಿಟ್ಟಿನಲ್ಲಿ ಸಾಕಷ್ಟು ಪರಿಶ್ರಮ ವಹಿಸುತ್ತಿದ್ದು, ಈಗಾಗಲೇ ಹಲವಾರು ಪ್ರಕರಣ ದಾಖಲಿಸುವ ಮೂಲಕ ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕುವಲ್ಲಿ ದಿಟ್ಟಹೆಜ್ಜೆ ಇಟ್ಟಿದೆ. ಚಳ್ಳಕೆರೆ ನಗರದಿಂದ ವೀರದಿಮ್ಮನಹಳ್ಳಿ ರಸ್ತೆಯ ರಾಮ್‌ಜೀಹಟ್ಟಿ ತಾಂಡದ ಪಾಲ್ಲುಣನಾಯ್ಕ(36) ಎಂಬ ವ್ಯಕ್ತಿ ತನ್ನ ಪಲ್ಸರ್ ಬೈಕ್‌ನಲ್ಲಿ ಒಟ್ಟು 61500 ಮೌಲ್ಯದ 11800 ಲೀಟರ್ ಮದ್ಯವನ್ನು ಸಾಗಾಟ ಮಾಡುವ ಸಂದರ್ಭದಲ್ಲಿ ಅಬಕಾರಿ ಅಧಿಕಾರಿಗಳು ಮೋಟಾರ್‌ಬೈಕ್ ಮತ್ತು ಆತನನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದ್ದಾರೆ. ಅಬಕಾರಿ ಇನ್‌ಪೆಕ್ಟರ್ ನಾಗರಾಜು, ಸಬ್‌ಇನ್‌ಸ್ಪೆಕ್ಟರ್ ತಿಪ್ಪಯ್ಯ, ರೇಖಾ, ಸಿಬ್ಬಂದಿ ನಾಗರಾಜು, ಸೋಮಶೇಖರ್ ಮೊದಲಾದವರು ಕಾರ್ಯಚರಣೆಯಲ್ಲಿ ಪಾಲ್ಗೊಂಡಿದ್ದರು.

### ಇಂದಿನಿಂದ ಕಣಿವೆ ಮಾರಮ್ಮ ಜಾತ್ರೆ

» ಚಿತ್ರದುರ್ಗ

ನಗರ ಪೊಲೀಸ್ ಠಾಣೆ ಆವರಣದಲ್ಲಿರುವ ಕಣಿವೆ ಮಾರಮ್ಮನ ಜಾತ್ರೆ ಮಾ.26 ರ ಇಂದಿನಿಂದ ಆರಂಭಗೊಂಡು 29 ರವರೆಗೆ ನಾಲ್ಕು ದಿನಗಳ ಕಾಲ ವಿಜೃಂಭಣೆಯಿಂದ ನಡೆಯಲಿದೆ. ದೇವಸ್ಥಾನದ ಮುಂಭಾಗ ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿದೆ. 26 ರಂದು ಸಂಜೆ 6–30 ಕ್ಕೆ ಮಧುವಣಗಿತ್ತಿ ಶಾಸ್ತ್ರ, 28 ರಂದು ಬೆಳಿಗ್ಗೆ 11 ಕ್ಕೆ ಹೂವಿನ ಅಲಂಕಾರ, ಸಕಲ ವಾದ್ಯಗಳೊಂದಿಗೆ ನಗರದ ರಾಜಬೀದಿಗಳಲ್ಲಿ ಅಮ್ಮನ ಮೆರವಣಿಗೆ. 29 ರಂದು ಜಾತ್ರೆಯ ಅಂಗವಾಗಿ ವಿಶೇಷ ಪೂಜೆ, ಬೆಳಿಗ್ಗೆ 11 ಕ್ಕೆ ಅನ್ನಸಂತರ್ಪಣೆ. ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಣಿವೆ ಮಾರಮ್ಮನ ಕೃಪೆಗೆ ಪಾತ್ರರಾಗುವಂತೆ ದೇವಸ್ಥಾನದ ಭಕ್ತ ಮಂಡಳಿ ಕೋರಿದೆ. ಜಾತ್ರಾ ಮಹೋತ್ಸವಕ್ಕೆ ಅಕ್ಕಿ, ಬೇಳೆ, ಬೆಲ್ಲ, ಎಣ್ಣೆ, ಧವಸ ಧಾನ್ಯಗಳನ್ನು ಕೊಡಲಿಚ್ಚಿಸುವ ಭಕ್ತಾಧಿಗಳು ಮಂಗಳವಾರದೊಳಗೆ ದೇವಸ್ಥಾನದ ಸನ್ನಿಧಿಯಲ್ಲಿ ಸಮರ್ಪಿಸಿ ರಸೀದಿಯನ್ನು ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಮೊ : 8951555830, 9448728083, 9480803146.

## ನಾಯಕನಹಟ್ಟಿ ಜಾತ್ರೆ: ಅಂತಿಮ ಸಿದ್ಧತೆಗಳ ಪರಿಶೀಲನೆ





» ಚಿತ್ರದುರ್ಗ

ಚಳ್ಳಕೆರೆ ತಾಲ್ಲೂಕು ನಾಯಕನಹಟ್ಟಿ ಶ್ರೀ ಗುರು ತಿಪ್ಪೇರುದ್ರಸ್ವಾಮಿ ಜಾತ್ರೆಯ ದೊಡ್ಡ ರಥೋತ್ಸವ ಮಾರ್ಚ್ 26 ರಂದು ಮಂಗಳವಾರ ನಡೆಯಲಿದೆ. ಜಾತ್ರೆಯ ಅಂತಿಮ ಹಂತದ ಸಿದ್ಧತೆಗಳ ಕುರಿತು ಉಪವಿಭಾಗಧಿಕಾರಿ ಎಂ.ಕಾರ್ತಿಕ್ ಸೋಮವಾರ ಪರಿಶೀಲನೆ ನಡೆಸಿದರು.

ಐತಿಹಾಸಿಕ ನಾಯಕನಹಟ್ಟಿ ಜಾತ್ರೆಗೆ ನಾಡಿನ ಹಲವು ಭಾಗಗಳಿಂದ ಲಕ್ಷಾಂತರ ಭಕ್ತರು ಆಗಮಿಸುವ ಹಿನ್ನೆಲೆಯಲ್ಲಿ ಭಕ್ತಾಧಿಕಾರಿಗಳಿಗೆ ಅಗತ್ಯ ಮೂಲಭೂತ ಸೌಲಭ್ಯ, ಕುಡಿಯುವ ನೀರಿಗೆ ವಿಶೇಷವಾದ ವ್ಯವಸ್ಥೆ ರೂಪಿಸಲಾಗಿದೆ. ತಿಪ್ಪೇರುದ್ರಸ್ವಾಮಿ ದೇವಾಲಯದ ಒಳಮಠ ಮತ್ತು ಹೊರಮಠದ ಆವರಣದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುವ ನಿಟ್ಟಿನಲ್ಲಿ ಎರಡೂ ದೇವಾಲಯದ ಆವರಣ ಸ್ವಚ್ಛಗೊಳಿಸಲಾಗಿದೆ. ಬಿಸಿಲಿನ ತಾಪ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಎರಡೂ ದೇವಾಲಯಗಳ ಆವರಣದಲ್ಲಿ ಬೃಹತ್ ಚಪ್ಪರದ ವ್ಯವಸ್ಥೆ ಮಾಡಲಾಗಿದೆ. ನೆರೆಯ ಆಂದ್ರ ಪ್ರದೇಶ, ತೆಲಂಗಾಣ ಸೇರಿದಂತೆ ಅಕ್ಕಪಕ್ಕದ ಜಿಲ್ಲೆಗಳು ಹಾಗೂ ರಾಜ್ಯದ ಮೂಲೆ ಮೂಲೆಯಿಂದ ಭಕ್ತಾಧಿಗಳು ಆಗಮಿಸುತ್ತಾರೆ. ಈ ಹಿನ್ನಲೆಯಲ್ಲಿ ಸೂಕ್ತ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲಾಗಿದೆ. ವಸ್ತುಪ್ರದರ್ಶನ ಮಳಿಗೆಗಳನ್ನು ತೆರೆಯಲಾಗಿದೆ. ಈ ಎಲ್ಲಾ ಸ್ಥಳಗಳಿಗೆ ಖುದ್ದಾಗಿ ಭೇಟಿ ನೀಡಿ ಎಂ.ಕಾರ್ತಿಕ್ ಸೋಮವಾರ ಪರಿಶೀಲಿಸಿದರು.




## ಫಾಸ್ಟ್ ನ್ಯೂಸ್

### ಪಾಲಿಕೆ ವ್ಯಾಪ್ತಿಯಲ್ಲಿ ನೀರು ಪೂರೈಕೆ, ನಿರ್ವಹಣೆಗೆ ಸಿಬ್ಬಂದಿಗಳ ನೇಮಕ

» ದಾವಣಗೆರೆ

ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಬೇಸಿಗೆ ಕಾಲದಲ್ಲಿ ನೀರಿನ ಬವಣೆ ನೀಗಿಸುವ ನಿಟ್ಟಿನಲ್ಲಿ ನೀರು ಸರಬರಾಜು ವಿಭಾಗಕ್ಕೆ ಇಂಜಿನಿಯರ್‌ಗಳನ್ನು ನಿಯೋಜಿಸಲಾಗಿದೆ ಎಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ. ವಿದ್ಯುತ್ ಮತ್ತು ನೀರು ಸರಬರಾಜಿನ ನೋಡಲ್ ಅಧಿಕಾರಿಯಾಗಿ ಎಂ.ಹೆಚ್ ಉದಯ್‌ಕುಮಾರ್ ಮೊ.ಸಂ: 9900899559 ಇವರು ಕಾರ್ಯನಿರ್ವಹಿಸುವರು. ಉಳಿದಂತೆ ವಲಯ ಕಚೇರಿ–01 ನೀರು ಸರಬರಾಜು ಮತ್ತು ಬೋರ್‌ವೆಲ್‌ಗಳ ರಿಪೇರಿ ಹಾಗೂ ದುರಸ್ತಿ ಕಾರ್ಯನಿರ್ವಹಣೆ ಮೇಲ್ವಿಚಾರಣೆಯನ್ನು ವಾರ್ಡ್ ನಂ: 1 ರಿಂದ 14 ಮತ್ತು 45 ವ್ಯಾಪ್ತಿಗೆ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಸಚಿನ್.ಸಿ.ಎಂ. ಮೊ.ಸಂ:7829137361, ವಾರ್ಡ್ 1 ರಿಂದ 5 ರವರೆಗೆ ಕಿರಿಯ ಅಭಿಯಂತರರಾದ ಈ.ಪ್ರಕಾಶ್ ಮೊ.ಸಂ:9742037934, ವಾರ್ಡ್ ನಂ:6 ರಿಂದ 10 ರವರೆಗೆ ಸಹಾಯಕ ಅಭಿಯಂತರರಾದ ಯುಸಫ್ ಅಲಿಖಾನ್. ಎನ್ ಮೊ.ಸಂ:9164091278, ವಾರ್ಡ್ ನಂ:11 ರಿಂದ 14 ಮತ್ತು 45 ರವರೆಗೆ ಸಹಾಯಕ ಅಭಿಯಂತರರಾದ ಪ್ರವೀಣಕುಮಾರ್.ಹೆಚ್.ಬಿ ಮೊ.ಸಂ:7760117430,ವಲಯ ಕಚೇರಿ–02 ವಾರ್ಡ್ ನಂ: 18,19,20,21,25,26,27,28,29, 30,32,33,34,35,36,37 ರ ವ್ಯಾಪ್ತಿಗೆ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ವಿನಾಯಕ ನಂಜಪ್ಪ ನಾಯಕ ಮೊ.ಸಂ:8431563165, ವಾರ್ಡ್ ನಂ:18,19,20,21,25,26,27 ಮತ್ತು 28 ರವರಗೆ ಸಹಾಯಕ ಅಭಿಯಂತರರಾದ ಮಧುಸೂಧನ್.ಪಿ. ಮೊ.ಸಂ:9611103412, ವಾರ್ಡ್ ನಂ:29,30,32,33,34,35,36 ಮತ್ತು 37 ರವರೆಗೆ ಕಿರಿಯ ಅಭಿಯಂತರರಾದ ಶೋಯಬ್ ಖಾನ್ ಮೊ.ಸಂ:9738729141. ವಲಯ ಕಚೇರಿ–03 ವಾರ್ಡ್ ನಂ:15,16,17,22,23,24,38,39,31,40,41.42,43 ಮತ್ತು 44 ರವರೆಗೆ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಅನುಪ್ ಕನೋಜ್ ಮೊ.ಸಂ:9880913909, ವಾರ್ಡ್ ನಂ: 15,16,17,22,23,24,38 ಮತ್ತು 39 ರವರೆಗೆ ಕಿರಿಯ ಅಭಿಯಂತರರಾದ ಮಾರುತಿ. ಎಸ್ ಹಾದಿಮನಿ ಮೊ.ಸಂ:9538770058, ವಾರ್ಡ್ ನಂ:31,40.41,42.43 ಮತ್ತು 44 ರವರೆಗೆ ಕಿರಿಯ ಅಭಿಯಂತರರಾದ ಶ್ವೇತಾ.ಈ ಮೊ.ಸಂ:9036887318 ಇವರನ್ನು ಸಂಪರ್ಕಿಸಲು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ನೀತಿ ಸಂಹಿತೆ ಉಲ್ಲಂಘನೆ ದೂರು ಸಲ್ಲಿಸಲು ಸಹಾಯವಾಣಿ

» ದಾವಣಗೆರೆ

ಲೋಕಸಭಾ ಸಾರ್ವತ್ರಿಕ ಚುನಾವಣೆ–2024 ರ ಸಂಬಂಧ ದಾವಣಗೆರೆ ಉತ್ತರ ಹಾಗೂ ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದ ಚುನಾವಣೆ ದೂರುಗಳಿದ್ದಲ್ಲಿ ಉತ್ತರ ಕ್ಷೇತ್ರಕ್ಕೆ 08192–213368, ದಕ್ಷಿಣ 08192–213369 ಮುಖಾಂತರ ದೂರುಗಳನ್ನು ಸಲ್ಲಿಸಬಹುದೆಂದು ಸಹಾಯಕ ಚುನಾವಣಾಧಿಕಾರಿ ತಿಳಿಸಿದ್ದಾರೆ.

### ರಾಷ್ಟ್ರೀಯ ಖೋ-ಖೋ ಚಾಂಪಿಯನ್‌ಷಿಪ್‌ಗೆ ಆಯ್ಕೆ

» ದಾವಣಗೆರೆ

ಮಾರ್ಚ್ 27 ರಿಂದ ಏಪ್ರಿಲ್ 1 ರವರೆಗೆ ದೆಹಲಿಯಲ್ಲಿ ನಡೆಯಲಿರುವ 56 ನೇ ರಾಷ್ಟ್ರೀಯ ಪುರುಷರ ಮತ್ತು ಮಹಿಳೆಯರ ಖೋ–ಖೋ ಚಾಂಪಿಯನ್‌ಷಿಪ್‌ನಲ್ಲಿ ಭಾಗವಹಿಸಲಿರುವ ಕರ್ನಾಟಕ ರಾಜ್ಯ ಪುರುಷರ ತಂಡಕ್ಕೆ ದಾವಣಗೆರೆ ಕ್ರೀಡಾ ವಸತಿ ನಿಲಯದ ಖೋ–ಖೋ ಕ್ರೀಡಾಪಟುಗಳಾದ ಲಕ್ಷ್ಮಣ ವಿ. ಕೆ ಮತ್ತು ಮಹಮ್ಮದ್ ತಾಸೀನ್ ಇವರುಗಳ ಆಯ್ಕೆಯಾಗಿರುತ್ತಾರೆ. ಕ್ರೀಡಾಕೂಟದಲ್ಲಿ ಭಾಗವಹಿಸುವ ರಾಜ್ಯ ತಂಡ ಉತ್ತಮ ಸಾಧನೆ ಮಾಡಲೆಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ.ಆರ್.ಜಯಲಕ್ಷ್ಮೀಬಾಯಿ, ಇಲಾಖೆಯ ಅಧೀಕ್ಷಕರಾದ ಅರ್ಪಿತಕೆ.ಜಿ. ಇಲಾಖೆಯ ತರಬೇತುದಾರರು ಹಾಗೂ ಸಿಬ್ಬಂದಿ ವರ್ಗದವರು ಶುಭಕೋರಿದ್ದಾರೆ.

### ಮೋಟಾರ್ ಬೈಕ್‌ಗೆ ಕಾರು ಡಿಕ್ಕಿ: ಓರ್ವ ಸಾವು

» ಚಳ್ಳಕೆರೆ

ನಗರದ ಚಿತ್ರದುರ್ಗ ರಸ್ತೆಯ ತಿರುಮಲ ಡಾಬಾದ ಬಳಿ ಚಳ್ಳಕೆರೆ ಕಡೆಯಿಂದ ಚಿತ್ರದುರ್ಗ ಕಡೆಗೆ ಚಲಿಸುತ್ತಿದ್ದ ಆಂಧ್ರಪ್ರದೇಶಕ್ಕೆ ಸೇರಿದ ಕಾರು ವೇಗವಾಗಿ ಬಂದು ಎದುರಿಗೆ ಬಂದ ಮೋಟಾರ್ ಬೈಕ್‌ಗೆ ಡಿಕ್ಕಿ ಪಡಿಸಿದ ಪರಿಣಾಮ ಬೈಕ್ ಸವಾರ ಗೋವಿಂದರಾಜ ಹಾಗೂ ಸಣ್ಣಪಾಲಯ್ಯ(65)ಇವರು ಗಾಯಗೊಂಡಿದ್ದು, ಸಣ್ಣಪಾಲಯ್ಯನನ್ನು ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುತ್ತಾನೆ.

ಗಾಯಾಳು ಗೋವಿಂದರಾಜು ಈ ಬಗ್ಗೆ ದೂರು ನೀಡಿ ಅತಿವೇಗವಾಗಿ ಕಾರು ಚಾಲನೆ ಮಾಡಿಕೊಂಡು ಬಂದು ಡಿಕ್ಕಿಪಡಿಸಿದ ಕಾರುಚಾಲಕ ಆಂಧ್ರಪ್ರದೇಶದ ಡಿ.ಕಿರಣ್‌ಕುಮಾರ್ ಮೇಲೆ ದೂರು ನೀಡಿದ್ದು, ಇನ್ಸ್‌ಪೆಕ್ಟರ್ ಕೆ.ಕುಮಾರ್ ಪ್ರಕರಣ ದಾಖಲಿಸಿದ್ದಾರೆ.

ಸಿದ್ಧತೆಗಳ ಪರಿಶೀಲನೆ ನಡೆಸಿದ ಹೆಚ್ಚುವರಿ ಜಿಲ್ಲಾಧಿಕಾರಿ ಕುಮಾರಸ್ವಾಮಿ

# ಇಂದು ಗುರುತಿಪ್ಪೇರುದ್ರಸ್ವಾಮಿ ದೊಡ್ಡರಥೋತ್ಸವ

» ಚಳ್ಳಕೆರೆ

ರಾಜ್ಯದ ಪ್ರಸಿದ್ಧ ಜಾತ್ರೆಗಳಲ್ಲಿ ಒಂದಾದ ತಾಲ್ಲೂಕಿನ ನಾಯಕನಹಟ್ಟಿ ಶ್ರೀಗುರುತಿಪ್ಪೇರುದ್ರಸ್ವಾಮಿಯ ಜಾತ್ರೆ ಮಾರ್ಚ್ 25ರಿಂದ ಆರಂಭವಾಗಿದೆ. ಮಾರ್ಚ್ 26ರ ಮಂಗಳವಾರ ಮಧ್ಯಾಹ್ನ 3.30ಕ್ಕೆ ದೊಡ್ಡ ರಥೋತ್ಸವ ಜರುಗಲಿದ್ದು, ಇದಕ್ಕಾಗಿ ಈಗಾಗಲೇ ರಾಜ್ಯದ ವಿವಿಧ ಭಾಗಗಳಿಂದ ನಾಯಕನಹಟ್ಟಿಗೆ ಸಾವಿರಾರು ಭಕ್ತರು ಆಗಮಿಸಿದ್ದಾರೆ.

ಜಾತ್ರೆಯನ್ನು ಯಶಸ್ವಿಯಾಗಿ ನಡೆಸುವ ನಿಟ್ಟಿನಲ್ಲಿ ಈಗಾಗಲೇ ಜಿಲ್ಲಾಧಿಕಾರಿಗಳು, ಜಿಲ್ಲಾ ರಕ್ಷಣಾಧಿಕಾರಿಗಳ ಮಾರ್ಗದರ್ಶನದಲ್ಲಿ ದೇವಸ್ಥಾನದ ಆಡಳಿತ ಮಂಡಳಿಯೊಂದಿಗೆ ಸಭೆ ನಡೆಸಿದ್ದು, ಜಾತ್ರೆಗೆ ಆಗಮಿಸುವ ಎಲ್ಲಾ ಭಕ್ತರಿಗೆ ಯಾವುದೇ ಕುಂದುಕೊರತೆಯಾಗದಂತೆ ಜಾಗ್ರತೆ ವಹಿಸುವಂತೆ ಸೂಚನೆ ನೀಡಲಾಗಿತ್ತು. ಮಂಗಳವಾರ ಮಧ್ಯಾಹ್ನ



ಹೆಚ್ಚುವರಿ ಜಿಲ್ಲಾಧಿಕಾರಿ ಕುಮಾರಸ್ವಾಮಿ, ಶ್ರೀಸ್ವಾಮಿಯ ರಥ ಸಾಗುವ ರಥಬೀದಿಯ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು, ರಸ್ತೆಯ ಎರಡೂ ಭಾಗಗಳಲ್ಲಿ ಜನ ಯಾವುದೇ ಕಾರಣಕ್ಕೂ ರಥಸಾಗುವ ಸಂದರ್ಭದಲ್ಲಿ ಮದ್ಯಪ್ರವೇಶ ಮಾಡದಂತೆ ನಿಗಾವಹಿಸುವಂತೆ ಸೂಚನೆ ನೀಡಿದರು. ಪ್ರಾಣಿಬಲಿಯನ್ನು ತಡೆಯುವಂತೆ ಸೂಚಿಸಿದರು.

ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಮಾತನಾಡಿ, ಜಾತ್ರೆ ಯಶಸ್ವಿ ಹಿನ್ನೆಲೆಯಲ್ಲಿ ವಿವಿಧ ತಾಲ್ಲೂಕು ಮಟ್ಟದ ಅಧಿಕಾರಿಗಳಿ ಹಾಗೂ ನಿರ್ವಹಿಸಬೇಕಾದ ಕಾರ್ಯಗಳ ಬಗ್ಗೆ ಮಾಹಿತಿ ನೀಡಲಾಗಿದೆ. ಯಾವುದೇ ರೋಗ ಹರಡದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಸಂಚಾರಿ ವ್ಯವಸ್ಥೆ ವ್ಯವಸ್ಥಿತಗೊಳಿಸುವಂತೆ ಪೊಲೀಸ್ ಇಲಾಖೆ ನಿರ್ದೇಶನ ನೀಡದೆ, ಭಕ್ತರ ಪ್ರಯಾಣದ ಅನುಕೂಲಕ್ಕಾಗಿ ಹೆಚ್ಚುವರಿ ಕೆಎಸ್‌ಆರ್‌ಟಿಸಿ ಬಸ್‌ಗಳನ್ನು ನಿಯೋಜನೆ ಮಾಡಿದೆ, ಕುಡಿಯುವ ನೀರಿನ ವ್ಯವಸ್ಥೆ ಎಲ್ಲಾ ಕಡೆಯೂ ಮಾಡಿದೆ ಎಂದರು. ತಹಶೀಲ್ದಾರ್ ರೇಹಾನ್‌ಪಾಷ, ಕಂದಾಯಾಧಿಕಾರಿ ಚೇತನ್‌ಕುಮಾರ್ ಮುಂತಾದವರು ಉಪಸ್ಥಿತರಿದ್ದರು.

ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ

# ಬಡ ಕುಟುಂಬದ ಮಕ್ಕಳನ್ನು ಮೇಲೆತ್ತಲು ಕಾರ್ಯಗಾರ ಅವಶ್ಯಕ: ಗಂಗಾಧರಪ್ಪ

» ಹೊಸದುರ್ಗ

ಗ್ರಾಮೀಣ ಭಾಗ ಮತ್ತು ಬಡ ಕುಟುಂಬದ ವಿದ್ಯಾರ್ಥಿಗಳನ್ನು ಮೇಲೆತ್ತಲು 2019 ರಿಂದ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಸಂಘ ತಾಲೂಕು ಘಟಕದ ವತಿಯಿಂದ ಸಿಇಟಿ ಮತ್ತು ನೀಟ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಂಬಂಧಪಟ್ಟಂತೆ ಕಾರ್ಯಗಾರವನ್ನು ಆರಂಭಿಸಲಾಗಿದೆ. ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಪ್ರಗತಿ ಸಾಧಿಸಲು ಇದು ಸಹಕಾರಿಯಾಗಲಿದೆ ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಆರ್. ಗಂಗಾಧರಪ್ಪ ಹೇಳಿದರು.

ಪಟ್ಟಣದ ಸರ್ಕಾರಿ ಪದವಿಪೂರ್ವ ಕಾಲೇಜು ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ,ಹೊಸದುರ್ಗ ಇವರ ವತಿಯಿಂದ ಸೋಮವಾರ ಆಯೋಜಿಸಿದ್ದ ಪ್ರಸಕ್ತ ಸಾಲಿನ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ 'ಉಚಿತ ಸಿಇಟಿ, ನೀಟ್ ತರಬೇತಿ ಕಾರ್ಯಾಗಾರ' ಉದ್ಘಾಟಿಸಿ ಅವರು ಮಾತನಾಡಿದರು ಮಾತನಾಡಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ವಿಸ್ತರಣಾಧಿಕಾರಿ ಶಶಿಧರ್ ಮಾತನಾಡಿ, ಬಡ ಮಕ್ಕಳು ಸಹ ಮೆಡಿಕಲ್



ಹಾಗೂ ಇಂಜಿನಿಯರಿಂಗ್ ನಂತಹ ಉನ್ನತ ವಿದ್ಯಾಭ್ಯಾಸ ಮಾಡಬೇಕು ಎಂಬ ಉದ್ದೇಶದಿಂದ ಸರ್ಕಾರಿ ನೌಕರರ ಸಂಘ ಉಚಿತ ಸಿಇಟಿ ನೀಟ್ ತರಬೇತಿ ನೀಡಲಾಗುತ್ತದೆ. ವಿದ್ಯಾರ್ಥಿಗಳು ಈ ಸೌಲಭ್ಯ ಪಡೆದುಕೊಳ್ಳಿ. ವಿದ್ಯಾರ್ಥಿ ಜೀವನ ಒಂದು ತಪಸ್ಸು ಇದ್ದಂತೆ ಪ್ರಾಮಾಣಿಕ ಪ್ರಯತ್ನ ಮಾಡಿ. ತಮ್ಮೂರಿಂದ ಬರಲು ತೊಂದರೆಯಾಗುತ್ತಿರುವ ವಿದ್ಯಾರ್ಥಿಗಳಿಗೆ ವಸತಿ (ಹಾಸ್ಟೆಲ್) ಸೌಲಭ್ಯವನ್ನು ಕಲ್ಪಿಸಲಾಗುವುದು ಎಂದು ಹೇಳಿದರು.

ಈ ವೇಳೆ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಗೌರವಾಧ್ಯಕ್ಷ ಜಯಣ್ಣ, ಮಾಜಿ ಅಧ್ಯಕ್ಷ ಲಕ್ಕಯ್ಯ, ಪ್ರಧಾನ ಕಾರ್ಯದರ್ಶಿ ವಿರೇಂದ್ರ ಪಾಟೀಲ್, ಕಾಲೇಜು ಪ್ರಾಂಶುಪಾಲ ವಿಶ್ವನಾಥ್ ಮತ್ತು ಉಪನ್ಯಾಸಕ ಜಗದೀಶ್ ಸೇರಿದಂತೆ ಇನ್ನಿತರ ಉಪನ್ಯಾಸಕರ ಹಾಗೂ ನೂರಾರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.



ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ಮಹಿಳಾ ಘಟಕಕ್ಕೆ ನೇಮಕಗೊಂಡಿರುವ ಪದಾಧಿಕಾರಿಗಳು.

### ಆನಿವಾಳ ಗ್ರಾಮದಲ್ಲಿ ಸಂಭ್ರಮದ ಶ್ರೀ ಶನೇಶ್ವರ ಸ್ವಾಮಿ ರಥೋತ್ಸವ

» ಹೊಸದುರ್ಗ

ತಾಲೂಕಿನ ಕಸಬಾ ಹೋಬಳಿಯ ಆನಿವಾಳ ಗ್ರಾಮದ ಶಾಂತಿನಗರದಲ್ಲಿ ನೆಲೆಸಿರುವಶನೇಶ್ವರಸ್ವಾಮಿಯ ರಥೋತ್ಸವ ಸೋಮವಾರ ಅತ್ಯಂತ ಸಂಭ್ರಮ ಸಡಗರದಿಂದ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನಡೆಯಿತು. ಕಳೆದ ಎರಡು ದಿನಗಳಿಂದ ಸ್ವಾಮಿಯ ಜಾತ್ರಾ ಮಹೋತ್ಸವ ನಡೆಯುತ್ತಿದ್ದು, ಈ ಬಾರಿ ವಿಶೇಷವಾಗಿ ನವಗ್ರಹಗಳ ಪ್ರತಿಷ್ಠಾಪನೆ, ನವಗ್ರಹಗಳ ದೇವಾಲಯ ಉದ್ಘಾಟನೆ ಮತ್ತು ನೂತನ ಓಂ ಶ್ರೀ ನವಗ್ರಹಗಳ ರಥೋತ್ಸವ ಹಾಗೂ ಕಳಶಾರೋಹಣ ನೆರವೇರಿತು. ಇನ್ನು ಸ್ವಾಮಿಯ ದೇವಾಲಯವನ್ನು ಹಸಿರು ತಳಿರು ತೋರಣ, ಬಾಳೆಕಂದು ಹಾಗೂ ಬಗೆ ಬಗೆಯ ಬಣ್ಣದ ಹೂಗಳಿಂದ ಅಲಂಕಾರ ಗೊಳಿಸಲಾಗಿತ್ತು. ದೇವಾಲಯಕ್ಕೆ ಬಂದ ಭಕ್ತರು ಸ್ವಾಮಿಗೆ ಪೂಜೆ ಸಲ್ಲಿಸಿ ಭಕ್ತಿ ಸಮರ್ಪಿಸಿದರು. ರಥೋತ್ಸವದ ನಂತರ ಧಾರ್ಮಿಕ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಮಾರಂಭದಲ್ಲಿ ಗುರುಮೂರ್ತಿ ಶಿವಾಚಾರ್ಯ ಸ್ವಾಮೀಜಿ, ಪ್ರಭು ಕುಮಾರ ಶಿವಾಚಾರ್ಯ ಸ್ವಾಮೀಜಿ, ನಂದೀಶ್ವರ ಶಿವಾಚಾರ್ಯ ಸ್ವಾಮೀಜಿ, ಅಭಿನವ ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ ಮತ್ತು ಅಭಿನವ ಮರುಳಸಿದ್ದ ಪಂಡಿತರಾಧ್ಯ ಶಿವಾಚಾರ್ಯ ಸ್ವಾಮೀಜಿಗಳವರು ಸಾನಿಧ್ಯ ವಹಿಸಿದ್ದರು. ಸ್ವಾಮಿಯ ಧಾರ್ಮಿಕ ಕಾರ್ಯವನ್ನು ಶನೇಶ್ವರ ಸ್ವಾಮಿ ಅಭಿವೃದ್ಧಿ ಸೇವಾ ಟ್ರಸ್ಟ್, ಶಾಂತಿನಗರ, ಆನಿವಾಳ, ಬಳ್ಳೇಕೆರೆ, ಬುರುಡೆ ಕಟ್ಟೆ, ಬಸವಾಪುರ, ಶಂಭೈನೂರು ಹಾಗೂ ಸುತ್ತಮುತ್ತಲ ಗ್ರಾಮಗಳ ಸಾವಿರಾರು ಭಕ್ತರು ನೆರವೇರಿಸಿದರು.



### ಶ್ರೀ ಯೋಗಿನಾರೇಯಣ ಯತೀಂದ್ರ ಜಯಂತಿ ಸರಳ ಆಚರಣೆ

ದಾವಣಗೆರೆ: ಸೋಮವಾರ ನಗರದ ಬಲಿಜ ವಿದ್ಯಾರ್ಥಿ ನಿಲಯದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಹಾಗೂ ಮಹಾನಗರ ಪಾಲಿಕೆ, ಜಿಲ್ಲಾ ಬಲಿಜ ಸಂಘ ಇವರುಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಲಾಗಿದ್ದ ಶ್ರೀ ಯೋಗಿನಾರೇಯಣ ಯತೀಂದ್ರ(ಕೈವಾರ ತಾತಯ್ಯ) ಜಯಂತಿಯಯನ್ನು ಸರಳವಾಗಿ ಆಚರಿಸಲಾಯಿತು. ಚುನಾವಣಾ ನೀತಿ ಸಂಹಿತೆ ಹಿನ್ನಲೆಯಲ್ಲಿ ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್. ಬಳ್ಳಾರಿ ಅವರು ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಸರಳವಾಗಿ ನೆರವೇರಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ, ಯೋಗಿನಾರೇಯಣ ಜಿಲ್ಲಾ ಬಲಿಜ ಸಂಘದ ಅಧ್ಯಕ್ಷರಾದ ನರಸಿಂಹಮೂರ್ತಿ, ಬಲಿಜ ಸಂಘದ ಮಹಿಳಾ ಜಿಲ್ಲಾಧ್ಯಕ್ಷರಾದ ಜಯದೇವಮ್ಮ, ಶ್ರೀಧರ್, ರಮಣಯ್ಯ ಇನ್ನಿತರರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಕಾಂಗ್ರೆಸ್ ಟಿಕೆಟ್ ಮತ್ತೊಮ್ಮೆ ಪರಿಶೀಲಿಸಲು ಮನವಿ

» ಚಿತ್ರದುರ್ಗ

ಸ್ಥಳೀಯರಿಗೆ ಟಿಕೆಟ್ ನೀಡಬೇಕೆಂದು ಒತ್ತಡ ಹಾಕಿದರು ಸಹ ಹೊರಗಿನವರಿಗೆ ಟಿಕೆಟ್ ನೀಡಿದ್ದಾರೆ. ಇದನ್ನು ಮರು ಪರಿಶೀಲನೆ ಮಾಡಬೇಕು ಎಂದು ವರಿಷ್ಠರಲ್ಲಿ ಕೇಳಿಕೊಳ್ಳುತ್ತೇನೆ ಎಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷ ಟಿಕೆಟ್ ಆಕಾಂಕ್ಷಿ ಜೆ.ಜೆ. ಹಟ್ಟಿ ತಿಪ್ಪೇಸ್ವಾಮಿ ತಿಳಿಸಿದರು.

ನಗರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಗೆ ಹಲವಾರು ವರ್ಷಗಳಿಂದ ಅನ್ಯಾಯವಾಗುತ್ತಾ ಬಂದಿದೆ. ನಾನು ಕಾಂಗ್ರೆಸ್ ಪಕ್ಷದಲ್ಲಿ ಎನ್.ಎಸ್.ಯು.ಐ, ಕಾರ್ಯಕರ್ತನಾಗಿ ಪ್ರಧಾನ ಕಾರ್ಯದರ್ಶಿಯಾಗಿ ಹಲವಾರು ವಿಭಾಗಗಳಲ್ಲಿ ಕೆಲಸ ಮಾಡಿ ಪಕ್ಷ ಸಂಘಟನೆ ಮಾಡಿದ್ದೇನೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಸ್ಥಳೀಯ ಅಭ್ಯರ್ಥಿಗಳನ್ನು ಪರಿಗಣಿಸಿದರು. ಆದರೆ ಲೋಕಸಭಾ ಚುನಾವಣೆಗೆ ಸ್ಥಳೀಯ ಅಭ್ಯರ್ಥಿಯನ್ನು ಏಕೆ ಪರಿಗಣನೆ ಮಾಡಲಿಲ್ಲ ಎಂಬುದು ಅರ್ಥ ಆಗಲಿಲ್ಲ ಎಂದರು.



ಡಾ. ಹೆಚ್.ಸಿ ಮಹಾದೇವಪ್ಪ ರವರು ವೀಕ್ಷಣೆಗಾಗಿ ಜಿಲ್ಲೆಗೆ ಬಂದಾಗ ಲೋಕಸಭಾ ಕ್ಷೇತ್ರದ 08 ವಿಧಾನಸಭಾ ಕ್ಷೇತ್ರದ ಜನರು ನನಗೆ ಟಿಕೆಟ್ ನೀಡುವಂತೆ ಹೇಳಿದ್ದರು ಆದರೂ ಸಹ ನನಗೆ ಟಿಕೆಟ್ ನೀಡಿಲ್ಲ. ಜಿಲ್ಲೆಯ ಶಾಸಕರುಗಳಾದ ಬಿ.ಜಿ ಗೋವಿಂದಪ್ಪ, ಡಿ. ಸುಧಾಕರ್, ಎನ್.ವೈ ಗೋಪಾಲಕೃಷ್ಣ, ಕೆ. ಸಿ ವೀರೇಂದ್ರ ಪಪ್ಪಿ ರವರುಗಳು ಸಹ ಸ್ಥಳೀಯರಿಗೆ ಟಿಕೆಟ್ ನೀಡಬೇಕೆಂದು ಶಿಫಾರಸು ಮಾಡಿದ್ದರು ಎಂದು ತಿಳಿಸಿದರು.

ಈ ಬಾರಿ ಲೋಕಸಭಾ ಚುನಾವಣೆಗೆ ನನಗೆ ಟಿಕೆಟ್ ನೀಡಬೇಕು ಎಂದು ಒಪ್ಪಿಗೆ ಸೂಚಿಸಿ ಪತ್ರಗಳನ್ನು ಹೈ ಕಮಾಂಡ್ ನೀಡಿದ್ದಾರೆ. ಆದರೆ ಈ ಪತ್ರಗಳು ಸುಳ್ಳು. ಪತ್ರಗಳನ್ನು ನಕಲು ಮಾಡಿಕೊಂಡು ತಂದಿದ್ದಾರೆ ಎಂದು ಪಕ್ಷದ ಹೈಕಮಾಂಡ್ ಹೇಳಿ ಎಡಗೈ ಸಮಾಜಕ್ಕೆ ಟಿಕೇಟ್ ತಪ್ಪಿಸಿದ್ದಾರೆ. ಈ ಬಗ್ಗೆ ನಾನು ಪೊಲೀಸ್ ಠಾಣೆಗೆ ದೂರು ಕೊಡುತ್ತೇನೆ. ಬೇಕಾದರೆ ಯಾವ ಪತ್ರಗಳು ನಕಲು ಎಂಬುದನ್ನು ಪರಿಶೀಲನೆ ಮಾಡುಕೊಳ್ಳಲಿ ಎಂದು ಸವಾಲು ಹಾಕಿದರು.ಲಿಡ್ಕರ್‌ನ ಮಾಜಿ ಅಧ್ಯಕ್ಷ ಓ. ಶಂಕರ್ ಮಾತನಾಡಿ, ಈ ಜಿಲ್ಲೆಯನ್ನು ಎಷ್ಟು ದಿನ ಬೇರೆ ಜಿಲ್ಲೆಯವರು ಬಂದು ಆಳಬೇಕು. ಮಾದಿಗ, ಲಂಬಾಣಿ, ಭೋವಿ, ಕೊರಮ, ಯಾರಿಗೆ ಬೇಕಾದರೂ ಕೊಡಲಿ ಸ್ಥಳೀಯರಿಗೆ ಟಿಕೆಟ್ ನೀಡಬೇಕು. ಸ್ಥಳೀಯರಿಗೆ ಟಿಕೆಟ್ ಕೊಟ್ಟರೆ 2 ಲಕ್ಷ ಅಂತರದಲ್ಲಿ ಗೆಲ್ಲುತ್ತೇವೆ ಎಂದು ಭವಿಷ್ಯ ನುಡಿದರು.

ಜಿಲ್ಲೆಗೆ 10 ವರ್ಷಗಳಿಂದ ಜಿಲ್ಲೆಗೆ ಅನ್ಯಾಯ ಆಗಿದೆ. ಸ್ಥಳೀಯರನ್ನು ಬಿಟ್ಟು ಹೊರಗಿನವರಿಗೆ ಟಿಕೇಟ್ ನೀಡಲಾಗುತ್ತಿದೆ. ಹೈಕಮಾಂಡ್ ಈ ರೀತಿ ಮಾಡುವುದಾದರೆ ಸ್ಥಳೀಯರ ಗತಿ ಏನು ಎಂದು ಪ್ರಶ್ನಿಸಿದ ಅವರು, ಈಗಿನ ಟಿಕೇಟ್ ಬದಲಾಯಿಸಿ ಸ್ಥಳೀಯರಾದ ತಿಪ್ಪೇಸ್ವಾಮಿ ಅವರಿಗೆ ಟಿಕೇಟ್ ನೀಡಬೇಕು.

ಮುಖಂಡ ಪ್ರಕಾಶ ಚೌಳೂರು, ಮಂಜುನಾಥ್, ಗ್ರಾ.ಪಂ.ಸದಸ್ಯ ಆನಂದ್ ನಗರಸಭೆ ಮಾಜಿ ಆಧ್ಯಕ್ಷ ಹೆಚ್.ಮಂಜಪ್ಪ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ವನ್ಯಜೀವಿ ಅಂಗಾಂಗಗಳ ಟ್ರೋಫಿ ಸರಂಡರ್ ಮಾಡಲು ಅವಕಾಶ

» ದಾವಣಗೆರೆ

ಸಾರ್ವಜನಿಕರು ತಮ್ಮಲ್ಲಿರುವ ಅಘೋಷಿತ ವನ್ಯಜೀವಿ, ಪ್ರಾಣಿಗಳ ಅಂಗಾಂಗಗಳ ಪದಾರ್ಥಗಳು, ಟ್ರೋಫಿಗಳು ಮತ್ತು ಸಂಸ್ಕರಿಸಿದ ಟ್ರೋಫಿಗಳನ್ನು ಅಧ್ಯರ್ಪಿಸಲು ಸಂಬಂಧಪಟ್ಟ ಅರಣ್ಯ ಇಲಾಖೆ, ಎಸಿಎಫ್, ಡಿಸಿಎಫ್ ಕಚೇರಿಗೆ ನೀಡಲು 90 ದಿನಗಳ ಕಾಲಾವಕಾಶ ನೀಡಲಾಗಿದೆ, ಅಧ್ಯರ್ಪಿಸಲು ಏ.11ರಂದು ಕೊನೆಯ ದಿನವಾಗಿದ್ದು, ದಾವಣಗೆರೆ ಜಿಲ್ಲೆಯ ಸಾರ್ವಜನಿಕರು ತಮ್ಮಲ್ಲಿರುವ ವನ್ಯಜೀವಿ ಅಂಗಾಗಳಾದ ಹುಲಿಉಗುರು, ಚಿರತೆಉಗುರು, ಆನೆದಂತ, ಜಿಂಕೆಕೊಂಬು, ವನ್ಯಪ್ರಾಣಿಗಳ ಚರ್ಮ, ವನ್ಯಜೀವಿ ವಸ್ತುಗಳು ಸೇರಿದಂತೆ ಇನ್ನಿತರೆ ವಸ್ತುಗಳನ್ನು ಹೊಂದಿದ್ದರೆ. ಅಧ್ಯರ್ಪಿಸಬೇಕು. ಕಚೇರಿಗೆ ಸಲ್ಲಿಸುವ ಮೊದಲು 100 ರೂಪಾಯಿಗಳ ಸ್ಟ್ಯಾಂಪ್ ಪೇಪರ್‌ನಲ್ಲಿ ನೋಟರಿ ಮಾಡಿರಬೇಕು ಮತ್ತು ನೋಟರಿಗೊಂಡ ಅಫಿಡವಿಟನಲ್ಲಿ ಅಧ್ಯರ್ಪಿಸುತ್ತಿರುವ ವನ್ಯಜೀವಿ ಅಂಗಾಂಗ, ಟ್ರೋಫಿಯನ್ನು ಅರ್ಜಿದಾರರು ಪಡೆದ ವಿಧ ಮತ್ತು ವರ್ಷದ ಬಗ್ಗೆ ಸ್ಪಷ್ಟವಾಗಿ ನಮೂದಿಸಿ ದೃಢೀಕರಿಸಿರಬೇಕು. ಹೆಚ್ಚಿನ ಮಾಹಿತಿಗಾಗಿ ದಾವಣಗೆರೆ ಪ್ರಾದೇಶಿಕ ವಲಯ ಕಚೇರಿ, ಮೊ. ನಂ:9481991703, ಜಗಳೂರು ಪ್ರಾದೇಶಿಕ ವಲಯ ಕಚೇರಿ,ಮೊ. ನಂ:9481991705, ಹೊನ್ನಾಳಿ ಪ್ರಾದೇಶಿಕ ವಲಯ ಕಚೇರಿ, ಮೊ. ನಂ:9481991704, ಹೊಸಕೆರೆ ರಂಗಯ್ಯನದುರ್ಗ ವನ್ಯಜೀವಿ ವಲಯ, ಮೊ. ನಂ:9481991706, ಮತ್ತು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ,ದಾವಣಗೆರೆ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ ದಾವಣಗೆರೆ ಇವರನ್ನು ಸಂಪರ್ಕಿಸಬಹುದೆಂದು.

### ಬೆಂಬಲ ಬೆಲೆಯಲ್ಲಿ ಖರೀದಿ ಕೇಂದ್ರಕ್ಕೆ ರಾಗಿ ನೀಡಿದ ರೈತರು ದಾಖಲೆ ಸಲ್ಲಿಸಿ

» ದಾವಣಗೆರೆ

2022–23ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಜಗಳೂರು ರಾಗಿ ಖರೀದಿ ಕೇಂದ್ರಕ್ಕೆ ರಾಗಿಯನ್ನು ನೀಡಿರುವ ಹೊರ ತಾಲ್ಲೂಕು, ಹೊರ ಜಿಲ್ಲೆಯಲ್ಲಿನ ಪಟ್ಟಿಯಲ್ಲಿರುವ 82 ರೈತರು ದಾಖಲೆಗಳನ್ನು ಕಡ್ಡಾಯವಾಗಿ ಸಲ್ಲಿಸಬೇಕು. 82 ರೈತರಿಂದ ಅರ್ಹ ದಾಖಲೆಗಳನ್ನು ಸಂಗ್ರಹಿಸಲು ಸೂಚಿಸಿರುವ ಹಿನ್ನೆಲೆಯಲ್ಲಿ ಸಂಬಂಧಪಟ್ಟ ರೈತರು ಜಗಳೂರು ತಾಲ್ಲೂಕು ಕಚೇರಿಯ ಆಹಾರ ಶಾಖೆಯನ್ನು ಸಂಪರ್ಕಿಸಿ 7 ದಿನಗಳ ಒಳಗಾಗಿ ಸಂಬಂಧಪಟ್ಟ ದಾಖಲೆಗಳ ಜೆರಾಕ್ಸ್ ಪ್ರತಿ, 2022–23 ನೇ ಸಾಲಿನ ಮುಂಗಾರಿನ ರಾಗಿ ಬೆಳೆದ ಪಹಣಿ ಪ್ರತಿ, ಫ್ರೂಟ್ಸ್ ಐಡಿ, ಗ್ರೇನ್ ವೋಚರ್, ಆಧಾರ್ ಕಾರ್ಡ್, ವೇ–ಬ್ರಿಡ್ಜ್ ರಶೀದಿ (ಇದ್ದಲ್ಲಿ) ಪಹಣಿಯಲ್ಲಿರುವ ವಾರಸುದಾರ ಮೃತಪಟ್ಟಿದ್ದಲ್ಲಿ ವಂಶವೃಕ್ಷ ದಾಖಲೆ, ಪಹಣಿ ಜಂಟಿ ಖಾತೆಯಲ್ಲಿದ್ದರೆ, 20/–ಸ್ಟಾಂಪ್ ಪೇಪರ್ ಮೇಲೆ ನೋಟರಿಯಿಂದ ದೃಢೀಕೃತ ಒಪ್ಪಿಗೆ ಪ್ರಮಾಣ ಪತ್ರ ತಾಲ್ಲೂಕು ಕಚೇರಿ ಜಗಳೂರಿನ ಆಹಾರ ಶಾಖೆಗೆ ತಪ್ಪದೇ ನೀಡಬೇಕು ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್ ತಿಳಿಸಿದ್ದಾರೆ.

### ನೀತಿ ಸಂಹಿತೆ ಪಾಲನೆಗೆ ಹೋಟೆಲ್, ವಿವಿಧ ವರ್ತಕರೊಂದಿಗೆ ಸಭೆ

» ದಾವಣಗೆರೆ

ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಲು ಜಿಲ್ಲೆಯಲ್ಲಿನ ಹೋಟೆಲ್ ಹಾಗೂ ರಸ್ಟೋರೆಂಟ್ ಮಾಲಿಕರು, ಪ್ಲೆಕ್ಸ್, ಕರಪತ್ರ ಮುದ್ರಣ ಮಾಲಿಕರು, ಕೇಬಲ್ ಆಪರೇಟರ್, ಪೆಟ್ರೋಲ್ ಬಂಕ್, ಕಲ್ಯಾಣ ಮಂಟಪ, ಹೆದ್ದಾರಿ ಫಲಕ ಮಾಲಿಕರು, ಟ್ರಾನ್ಸ್‌ಪೋರ್ಟ್ ಮಾಲಿಕರು, ಚಿನ್ನಬೆಳ್ಳಿ ವ್ಯಾಪಾರಿಗಳ ಸಭೆಯನ್ನು ಮಾರ್ಚ್ 26 ರಂದು ಬೆಳಗ್ಗೆ 11.30 ಕ್ಕೆ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿವಿ ಅವರ ಅಧ್ಯಕ್ಷತೆಯಲ್ಲಿ ಕರೆಯಲಾಗಿದೆ.

### ಬೈಕಿಗೆ ಅಪರಿಚಿತ ವಾಹನ ಡಿಕ್ಕಿ ಓರ್ವ ದುರ್ಮರಣ

» ಹೊಸದುರ್ಗ

ಅಪರಿಚಿತ ವಾಹನವೊಂದು ಸ್ಕೂಟಿಗೆ ರಭಸವಾಗಿ ಡಿಕ್ಕಿ ಪಡಿಸಿದ ಪರಿಣಾಮ ಸ್ಕೂಟಿ ಚಾಲಕ ಸ್ಥಳದಲ್ಲೆ ದುರ್ಮರಣ ಹೊಂದಿರುವ ಘಟನೆ ತಾಲೂಕಿನ ಕೆಲ್ಲೋಡು ಸಮೀಪ ಶುಕ್ರವಾರ ರಾತ್ರಿ ಸಂಭವಿಸಿದೆ. ಮೃತನನ್ನು ಮೂಲತಹ ಹೊಸದುರ್ಗ ತಾಲೂಕಿನ ಎಂ.ಜಿ.ದಿಬ್ಬ ಗ್ರಾಮದ ನಾಗರಾಜ (30) ಎಂದು ತಿಳಿದು ಬಂದಿದ್ದು ಈತ ತಾಲೂಕಿನ ಕೆಲ್ಲೋಡು ಗ್ರಾಮದಲ್ಲಿ ಮೆಡಿಕಲ್ ಸ್ಟೋರ್ ಅಂಗಡಿಯನ್ನ ಇಟ್ಟುಕೊಂಡಿದ್ದು ಶುಕ್ರವಾರ ರಾತ್ರಿ ಅಂಗಡಿಯ ಬಾಗಿಲು ಹಾಕಿಕೊಂಡು ಹೊಸದುರ್ಗಕ್ಕೆ ಬರುತಿದ್ದ ಸಂಧರ್ಬದಲ್ಲಿ ಯಾವುದೋ ಅಪರಿಚಿತ ವಾಹನವೊಂದು ಚಾಲಕನ ಅಜಾಗರೂಕತೆ ಹಾಗೂ ನಿರ್ಲಕ್ಷೆಯಿಂದ ವಾಹನವನ್ನ ಚಾಲಾಯಿಸಿ ಕೊಂಡು ಬಂದು ಡಿಕ್ಕಿ ಪಡಿಸಿದ ಪರಿಣಾಮ ಈ ಘಟನೆ ಸಂಭವಿಸಿದ್ದು ಮೃತ ನಾಗರಾಜ ಕಳೆದ ಒಂದು ವರ್ಷದ ಹಿಂದೆಯಷ್ಟೆ ತಾಲೂಕಿಜ ಕಾರೇಹಳ್ಳಿ ಗ್ರಾಮದ ಯುವತಿಯೊಂದಿಗೆ ವಿವಾಹವಾಗಿ ಹೊಸದುರ್ಗ ಪಟ್ಟಣದಲ್ಲಿ ಮನೆ ಮಾಡಿದೆ.

# ಆಧ್ಯಾತ್ಮಿಕ ಸಾಧನೆಯೊಂದಿಗೆ ದೈವತ್ವಕ್ಕೆ ಏರಿದ ಯತೀಂದ್ರರು

» ಚಿತ್ರದುರ್ಗ

ಸಾಮಾನ್ಯ ಕುಟುಂಬದಲ್ಲಿ ಜನಿಸಿ, ಆಧ್ಯಾತ್ಮಿಕ ಸಾಧನೆಯೊಂದಿಗೆ ಮಾನವನಿಂದ ದೈವತ್ವಕ್ಕೆ ಏರಿದ ಮಹಾನ್ ಪವಾಡ ಪುರಷ ಯೋಗಿ ನಾರೇಯಣ ಯತೀಂದ್ರರು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಆಯೋಜಿಸಲಾದ ಜಯಂತಿ ಕಾರ್ಯಕ್ರಮದಲ್ಲಿ ಶ್ರೀ.ಯೋಗಿ ನಾರೇಯಣ ಯತೀಂದ್ರ (ಕೈವಾರ ತಾತಯ್ಯ) ಭಾವಚಿತ್ರಕ್ಕೆ ಪುಷ್ಪ ನಮನ ಸಮರ್ಪಿಸಿ ಅವರು ಮಾತನಾಡಿದರು.

ನಾಯಕನಹಟ್ಟಿಯಂತಯೇ ಕೈವಾರವು ಕೂಡ ಸುಪ್ರಸಿದ್ಧ ಮಹಿಮಾತ್ಮ ಯಾತ್ರ ಕ್ಷೇತ್ರವಾಗಿದೆ. ಮಾನವರಾಗಿ ಸಂಸಾರ, ಸಾಮಾಜಿಕ ಜಂಜಾಟಗಳನ್ನು ಅನುಭವಿಸಿದ ನಾರೇಯಣರು, ಆಧ್ಯಾತ್ಮಕ ಸಾಧನೆ ಮಾಡಿ, ಸಮಾಜಕ್ಕೆ ದಾರಿ ದೀಪವಾದರು. ಈ ಮೂಲಕ ಸಮಾಜದಲ್ಲಿ ಮೂಢನಂಬಿಕೆ ಕಂದಾಚಾರಗಳನ್ನು ತೊಡದು ಹಾಕಿದರು.

ಸಧೃಡ ಸಮಾಜ ಕಟ್ಟುವಲ್ಲಿ ಶ್ರಮಿಸಿದರು. ಅಪಾರ ಜ್ಞಾನಶಕ್ತಿಯಿಂದ ಕಾಲಜ್ಞಾನ ಗ್ರಂಥವನ್ನು ಸಹ ರಚಿಸಿದರು. ಈ ಮೂಲಕ ಮುಂದಿನ ದಿನಗಳಲ್ಲಿ ಸಮಾಜ ಎಚ್ಚರಿಕೆಯಿಂದ ಹೇಗೆ ಸಾಗಬೇಕು ಎಂಬುದನ್ನು ತಿಳಿಸಿದರು. ನಾವೆಲ್ಲರೂ ಯೋಗಿ ನಾರೇಯಣ ಯತೀಂದ್ರರು ಬೋಧಿಸಿದ ತತ್ವ ಸಿದ್ಧಾಂತಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು, ಪರಸ್ಪರ ಪ್ರೀತಿ ಸಹಬಾಳ್ವೆಯಿಂದ ಬದುಕಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಕರೆ ನೀಡಿದರು. ಯೋಗಿ ನಾರೇಯಣ ಯತೀಂದ್ರ (ಕೈವಾರ ತಾತಯ್ಯ) ಕುರಿತು ನಿವೃತ್ತ ಶಿಕ್ಷಕ ಹುರುಳಿ ಬಸವಾರಜ್ ಉಪನ್ಯಾಸ ನೀಡಿದರು. ರಂಗನಿರ್ದೇಶಕ ಕೆ.ಪಿ.ಎಂ. ಗಣೇಶಯ್ಯ ನಾಡಗೀತಿ ಪ್ರಸ್ತುತ ಪಡಿಸಿ, ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು. ಬಲಿಜ ಸಮಾಜದ ಮುಖಂಡರುಗಳಾದ ಎಂ.ಜೆ. ಸೂರ್ಯನಾರಾಯಣ, ನಂಜುಂಡಸ್ವಾಮಿ, ವೈ. ಹನುಮಂತಪ್ಪ, ಎಂ. ಗಂಗಣ್ಣ, ಸಿ.ಹೆಚ್.ಬಸವರಾಜ್, ಪ್ರಹ್ಲಾದ್ ಸೇರಿದಂತೆ ಮತ್ತಿರರು ಉಪಸ್ಥಿತರಿದ್ದರು.



# ಸುಗಮವಾಗಿ ನಡೆದ ಎಸ್.ಎಸ್.ಎಲ್.ಸಿ ಪರೀಕ್ಷೆ, 20856 ವಿದ್ಯಾರ್ಥಿಗಳು ಹಾಜರು

» ದಾವಣಗೆರೆ

ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ ಸುಗಮವಾಗಿ ನಡೆದಿದ್ದು ಮಾರ್ಚ್ 25 ರಂದು ನಡೆದ ಪ್ರಥಮ ಭಾಷೆ ಪರೀಕ್ಷೆಯು ಸುಗಮವಾಗಿ ನಡೆದಿದ್ದು 20856 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿರುತ್ತಾರೆ.


ಜಿಲ್ಲೆಯ 82 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆದಿದ್ದು 10277 ಗಂಡು, 10729 ಹೆಣ್ಣು ಸೇರಿ 21006 ಒಟ್ಟು ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಂಡಿದ್ದಾರೆ. ಇದರಲ್ಲಿ 10188 ಗಂಡು, 10668 ಹೆಣ್ಣು ಸೇರಿ 20856 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ 150 ವಿದ್ಯಾರ್ಥಿಗಳು ಗೈರಾಗಿರುತ್ತಾರೆ.

**ಸಹಾಯವಾಣಿ;** ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳಿಗೆ ಹಾಗೂ ಪೋಷಕರು, ಶಿಕ್ಷಕರ ಸಹಾಯಕ್ಕಾಗಿ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಉಪನಿರ್ದೇಶಕರ ಕಚೇರಿಯಲ್ಲಿ ಸಹಾಯವಾಣಿ ಸ್ಥಾಪಿಸಲಾಗಿದೆ. ಪರೀಕ್ಷೆಗೆ ಸಂಬಂಧಿಸಿದ ಸಹಾಯಕ್ಕಾಗಿ 9964198201 ಮೊಬೈಲ್‌ಗೆ ಕರೆ ಮಾಡಲು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ತಿಳಿಸಿದ್ದಾರೆ.



ಇಂದು ಪರೀಕ್ಷೆ ನಡೆದ ಕೇಂದ್ರಗಳಿಗೆ ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಹಾಗೂ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಕೆ.ಕೊಟ್ರೇಶ್ ರವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

### ಸಮಾಜದಲ್ಲಿ ಧಾರ್ಮಿಕ ಜಾಗೃತಿ ಮೂಡಿಸುವ ಕಾರ್ಯಕ್ಕೆ ನಾಂದಿಯಾಡಿದ ಯೋಗಿನಾರೇಯಣ



» ಚಳ್ಳಕೆರೆ

ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಮತ್ತು ತಾಲ್ಲೂಕು ಬಲಿಜ ಸಂಘಟನೆಗಳ ಸಹಯೋಗದಲ್ಲಿ ಯೋಗಿನಾರೇಯಣ ಜಯಂತಿಯನ್ನು ಆಚರಿಸಲಾಯಿತು. ತಹಶೀಲ್ದಾರ್ ರೇಹಾನ್‌ಪಾಷ ಯೋಗಿನಾರೇಯಣ ಭಾವಚಿತ್ರಕ್ಕೆಪುಷ್ಪನಮನ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಯೋಗಿನಾರೇಯಣ ಸಮಾಜಕ್ಕೆ ನೀಡಿದ ಕೊಡುಗೆಗಳು ಅಪಾರವೆಂದರು. ತಾಲ್ಲೂಕು ಬಲಿಜ ಸಂಘದ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿ ಮಾತನಾಡಿ, ಅನೇಕ ಮಹಾನ್‌ಪುರುಷರು, ಸಾಧುಸಂತರು ಸಮಾಜದ ಏಳಿಗಾಗಿ ಶ್ರಮಿಸಿದ್ದಾರೆ. ವಚನ ಸಾಹಿತ್ಯದ ಮೂಲಕ ಜನರಲ್ಲಿ ಜಾಗೃತಿ ಮೂಡಿಸಿದ್ದಾರೆ. ಯೋಗಿನಾರೇಯಣರವರು ಸಹ ಸಮಾಜದಲ್ಲಿ ಧಾರ್ಮಿಕ, ಸಾಮಾಜಿಕ ಬದಲಾವಣೆಗೆ ಸಾಕಷ್ಟು ಶ್ರಮಿಸಿದ್ದಾರೆಂದರು. ಬಲಿಜ ಯುವಕ ಸಂಘದ ಅಧ್ಯಕ್ಷ ಜಿ.ವೆಂಕಟೇಶ್, ಆಟೋಮೊಬೈಲ್ಸ್‌ನಾಗರಾಜು, ಹಿರಿಯ ಪತ್ರಕರ್ತರಾದ ಬಿ.ವಿ.ಮಂಜುನಾಥ, ಚಿದಾನಂದಮೂರ್ತಿ, ನಿರಂಜನಮೂರ್ತಿ ಮುಂತಾದವರು ಉಪಸ್ಥಿತರಿದ್ದರು.

### ಕರ್ನಾಟಕದಿಂದ 4 ಲಕ್ಷ ಕೋಟಿ ಜಿ.ಎಸ್.ಟಿ ಹಣ ಕೇಂದ್ರದ ಪಾಲಾಗುತ್ತಿದೆ

» ಹೊಸದುರ್ಗ

ಕರ್ನಾಟಕದಿಂದ ಹೋಗುತ್ತಿರುವ □ 4 ಲಕ್ಷ ಕೋಟಿ ಜಿ.ಎಸ್.ಟಿ ಹಣ ಕೇಂದ್ರದ ಪಾಲಾಗುತ್ತಿದೆ ರಾಜ್ಯದ ಜನರಿಗೆ ಇದರ ಸದುಪಯೋಗವಾಗುತ್ತಿಲ್ಲ ಎಂದು ಶಾಸಕ



ಬಿ.ಜಿ.ಗೋವಿಂದಪ್ಪ ಕಿಡಿ ಕಾರಿದ್ದಾರೆ. ಪಟ್ಟಣದ ಶ್ರೀದೇವಿ ಸಮುದಾಯ ಭವನದಲ್ಲಿ ಆಯೋಜಿಸಿದ್ದ 'ತಾಲ್ಲೂಕಿನ ಬೂತ್ ಮಟ್ಟದ ಏಜೆಂಟರಿಗೆ (ಬಿ.ಎಲ್.ಎ) ಒಂದು ದಿನದ ತರಬೇತಿ ಕಾರ್ಯಕ್ರಮ ' ದಲ್ಲಿ ಭಾಗವಹಿಸಿ ಮಾತನಾಡಿದ ಅವರು ಪ್ರಧಾನಿ ನರೇಂದ್ರ ಮೋದಿ ರಾಜ್ಯಕ್ಕೆ ಹಲವು ಬಾರಿ ಬಂದರೂ, ಬರಗಾಲ, ಕುಡಿಯುವ ನೀರು, ಮೇವಿನ ಕೊರತೆಯಿಂದ ಜನರು ತತ್ತರಿಸುತ್ತಿದ್ದರೂ, ಈ ಬಗ್ಗೆ ಎಲ್ಲಿಯೂ ಮಾತಾಡಿಲ್ಲ. ಹಣವನ್ನು ಸಹ ರಾಜ್ಯಕ್ಕೆ ಬಿಡುಗಡೆ ಮಾಡಿಲ್ಲವೆಂದು ದೂರಿದರು. ಭದ್ರಾ ಮೇಲ್ದಂಡೆ ಕಾಮಗಾರಿ ಬಿರುಸಿನಿಂದ ಸಾಗುತ್ತಿದ್ದು, ಅಕ್ಟೋಬರ್ 2 ರ ವೇಳೆಗೆ ತಾಲ್ಲೂಕಿನ 101 ಕೆರೆಗಳಿಗೆ ಹಾಗೂ ಜಮೀನುಗಳಿಗೆ ಭದ್ರಾ ನೀರು ಹರಿಯಲಿದೆ. ವಿದ್ಯುತ್ ಕೇಂದ್ರ ಆರಂಭಿಸಲು ಭೂಮಿ ಖರೀದಿಸಲಾಗಿದೆ. ಶೀಘ್ರದಲ್ಲೇ ಈ ಕಾರ್ಯವೂ ಮುಗಿಯಲಿದೆ. ತಾಲ್ಲೂಕಿನ ಜನತೆ ಜಮೀನುಗಳಿಗೆ ನೀರು, ಶುದ್ಧ ಕುಡಿಯುವ ನೀರು ಹಾಗೂ ನಿರಂತರ ವಿದ್ಯುತ್ ಪಡೆದು ಸುಭಿಕ್ಷವಾಗಿರಲಿ ಎಂದರು.

### ಮಾಜಿ ಸಚಿವ ಎಚ್.ಆಂಜನೇಯ ಅವರಿಗೆ ಕೆಪಿಸಿಸಿ ಕಾರ್ಯಾಧ್ಯಕ್ಷ ಸ್ಥಾನ ನೀಡಲು ಮನವಿ

**ಬಳ್ಳಾರಿ:** ಮಾಜಿ ಸಚಿವರು, ಪರಿಶಿಷ್ಟ ಜಾತಿ ಮುಖಂಡರೂ ಆಗಿರುವ ಹೆಚ್. ಆಂಜನೇಯ ಅವರನ್ನು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಕಾರ್ಯಾಧ್ಯಕ್ಷರನ್ನಾಗಿ ನೇಮಕ ಮಾಡಿ ಆದೇಶ ಹೊರಡಿಸಬೇಕು ಎಂದು ನಿರಾಶ್ರಿತರ ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷರಾದ ಎ.ಮಾನಯ್ಯ, ಛಲವಾದಿ ಮಹಾ ಸಭಾ ಜಿಲ್ಲಾಧ್ಯಕ್ಷರು ಹಾಗು ಕಾಂಗ್ರೆಸ್ ಮುಖಂಡ ಛಲವಾದಿ ನರಸಪ್ಪ, ರೂಪನಗುಡಿ ಕಾಂಗ್ರೆಸ್ ಮುಖಂಡ ರಾಮಾಂಜಿನಿ, ಎರ್ರಿಸ್ವಾಮಿ ಹಲಕುಂದಿ ಅವರು ಮನವಿ ಮಾಡಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಜ್ಯದಲ್ಲಿರುವ ಅಸ್ಪೃಶ್ಯರೆಲ್ಲರೂ ಹೆಚ್ಚಿನ ಮಟ್ಟದಲ್ಲಿ ಅವರ ಬೆಂಬಲಿಗರು ಇದ್ದು, ಅವರ ಪರವಾಗಿದ್ದಾರೆ. ಅಲ್ಲದೆ, ಉತ್ತರ ಕರ್ನಾಟಕದಲ್ಲಿರುವ ಪರಿಶಿಷ್ಟ ಜಾತಿ ಜನಾಂಗದ ಸಮುದಾಯವು ಹೆಚ್. ಆಂಜನೇಯ ಅವರ ಪರವಾಗಿದ್ದು, ಅವರಿಗೆ ಬೆಂಬಲವಾಗಿದ್ದಾರೆ. ಅಲ್ಲದೆ, ಆಂಜನೇಯ ಅವರನ್ನು ಕೆಪಿಸಿಸಿ ಕಾರ್ಯಾಧ್ಯಕ್ಷರನ್ನಾಗಿ ನೇಮಕ ಮಾಡುವುದರಿಂದ ಪ್ರಸ್ತುತ ನಡೆಯುವ ಲೋಕಸಭಾ ಚುನಾವಣೆಯಲ್ಲೂ ಅನುಕೂಲವಾಗಲಿದೆ ಎಂದು ತಿಳಿಸಿದ್ದಾರೆ. ಆಂಜನೇಯ ಅವರನ್ನು ಪಕ್ಷದ ರಾಜ್ಯ ಕಾರ್ಯಾಧ್ಯಕ್ಷರನ್ನಾಗಿ ನೇಮಕ ಮಾಡುವುದರಿಂದ ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಆಂಜನೇಯ ಅವರ ನೇತೃತ್ವದಲ್ಲಿ ಮತಯಾಚಿಸಲು ಅನುಕೂಲವಾಗುತ್ತದೆ.

### ಹೊಸದುರ್ಗದಲ್ಲಿ 4.45 ಲಕ್ಷ ರೂ ವಶ

**ಹೊಸದುರ್ಗ:** ಪಟ್ಟಣದ ಗಾಂಧಿ ವೃತ್ತದ ಬಳಿ ಮಧ್ಯಾಹ್ನದ ವೇಳೆಯಲ್ಲಿ ವಾಹನದಲ್ಲಿ ಒಬ್ಬರು ಸೂಕ್ತ ದಾಖಲೆಯಿಲ್ಲದೆ ಸಾಗಿಸುತ್ತಿದ್ದ □ 3 ಲಕ್ಷ ರೂ ಹಣವನ್ನು ಚುನಾವಣಾ ಅಧಿಕಾರಿಗಳ ತಂಡ ವಶಪಡಿಸಿಕೊಂಡಿದ್ದರೆ ತಾಲ್ಲೂಕಿನ ಗಡಿ ಅಹಮದ್ ನಗರ ಚೆಕ್ ಪೋಸ್ಟ್ ಬಳಿ ಸೂಕ್ತ ದಾಖಲೆಗಳಿಲ್ಲದ □.1.45 ಲಕ್ಷ ರೂ. ಗಳನ್ನು ಚುನಾವಣಾ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ



ಚಳ್ಳಕೆರೆ ನಗರದ ಚಿಗುರು ಈ–ಕಿಡ್ಸ್ ಪ್ರೀ ಸ್ಕೂಲ್‌ನಲ್ಲಿ ಸೋಮವಾರ ಹೋಳಿ ಹಬ್ಬದ ಹಿನ್ನೆಲೆಯಲ್ಲಿ ಪುಟ್ಟಮಕ್ಕಳು ಪರಸ್ಪರ ಬಣ್ಣ ಎರಚುವ ಮೂಲಕ ಹೋಳಿ ಆಚರಿಸಿದರು. ಕಾರ್ಯದರ್ಶಿ ಜೆ.ಸಿ.ಶಶಿಕುಮಾರ್, ಸ್ಫೂರ್ತಿ, ಪುಷ್ಪ, ಶಾಂತ, ಸಾವಿತ್ರಮ್ಮ, ನಾಗವೇಣಿ, ಡಾ.ಉದಯ, ಮೌನಿಕ, ಮಂಜುಶ್ರೀ, ಡಿ.ದೇಸಾಯಿ ಮೊದಲಾದವರು ಇದ್ದರು.

## ಪ್ರಮುಖ ಸುದ್ದಿ

### ಕಾಲುವೆಯಲ್ಲಿನ ಅನಧಿಕೃತ ಪಂಪ್‌ಸೆಟ್ ತೆರವಿಗೆ ಮುಂದಾದ ಜಿಲ್ಲಾಡಳಿತ, ತಂಡಗಳ ರಚನೆ

# ಭದ್ರಾ ನಾಲೆಯ ಅಚ್ಚುಕಟ್ಟುದಾರರಿಗೆ ನೀರು: ಡಾ.ವೆಂಕಟೇಶ್

» ದಾವಣಗೆರೆ

ಪ್ರಸಕ್ತ ವರ್ಷದ ಮುಂಗಾರು ಹಾಗೂ ಹಿಂಗಾರು ವೈಫಲ್ಯದಿಂದ ಭದ್ರಾ ಜಲಾಶಯದಲ್ಲಿ ನೀರಿನ ಸಂಗ್ರಹ ಕಡಿಮೆಯಾಗಿದ್ದರಿಂದ ಅಚ್ಚುಕಟ್ಟು ಪ್ರದೇಶದ ರೈತರಿಗೆ ಹಾಗೂ ಕುಡಿಯುವ ನೀರಿಗೆ ಸಮಸ್ಯೆ ಎದುರಾಗಿದೆ. ಇದರಿಂದ ಸರದಿಯನ್ವಯ ನೀರು ಬಿಡಲು ಭದ್ರಾ ಕಾಡಾ ಮಂಡಳಿ ನಿರ್ಧಾರದಂತೆ ಅಚ್ಚುಕಟ್ಟು ಪ್ರದೇಶದ ಕೊನೆ ಭಾಗದ ರೈತರಿಗೆ ನೀರು ಕೊಡಲು ಕಾಲುವೆಯಲ್ಲಿ ಅನಧಿಕೃತವಾಗಿ ಅಳವಡಿಸಿರುವ ಪಂಪ್‌ಸೆಟ್‌ಗಳ ತೆರವಿಗಾಗಿ ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಅವರು ಅಧಿಕಾರಿಗಳ ತಂಡ ರಚಿಸಿ ಆದೇಶಿಸಿದ್ದಾರೆ.

ವಿದ್ಯುತ್ ಸಂಪರ್ಕ ಕಲ್ಪಿಸಿದ್ದಲ್ಲಿ ಇದನ್ನು ಕಡಿತಗೊಳಿಸುವುದು ಮತ್ತು



ಡೀಸೆಲ್ ಜನರೇಟರ್ ಅಳವಡಿಸಿದ್ದಲ್ಲಿ ಅದನ್ನು ಕಡಿತ ಮಾಡುವುದು ಮತ್ತು ನಾಲೆಯಲ್ಲಿ ನೀರೆತ್ತಲು ಅಳವಡಿಸಿದ ಎಲ್ಲಾ ಪೈಪ್‌ಗಳನ್ನು ತೆರವು ಮಾಡಲು ಮತ್ತು ಒಂದು ವೇಳೆ ತೆರವು ಮಾಡದಿದ್ದಲ್ಲಿ ವಶಕ್ಕೆ ಪಡೆಯಲು ಕಂದಾಯ, ಪಾಲಿಕೆ, ಪೊಲೀಸ್, ನೀರಾವರಿ ಇಲಾಖೆ ಹಾಗೂ ಬೆಸ್ಕಾಂ ಇಂಜಿನಿಯರ್‌ಗಳ ತಂಡವನ್ನು ರಚಿಸಲಾಗಿದೆ.

ದಾವಣಗೆರೆ ತಾ; ತಹಶೀಲ್ದಾರರು, ಉಪ ತಹಶೀಲ್ದಾರರು, ಪಾಲಿಕೆ ಸಿಬ್ಬಂದಿ, ವೃತ್ತ ನಿರೀಕ್ಷಕರು,ಮಾಯಕೊಂಡ,ಗ್ರಾಮಾಂತರ, ಹದಡಿ, ಮಾಯಕೊಂಡ, ಕಾರ್ಯಪಾಲಕ ಇಂಜಿನಿಯರ್, ನೀರಾವರಿ ನಿಗಮ, ಬೆಸ್ಕಾಂ ಕಾರ್ಯಪಾಲಕ ಇಂಜಿನಿಯರ್ ಹಾಗೂ ಸಹಾಯಕ ಕಾರ್ಯಪಾಲಕ ಇಂಜಿನಿಯರ್,ಹರಿಹರ ತಾ;ತಹಶೀಲ್ದಾರ್, ಉಪ ತಹಶೀಲ್ದಾರ್ ಹಾಗೂ ರಾಜಸ್ವ ನಿರೀಕ್ಷಕರು, ಗ್ರಾಮಲೆಕ್ಕಿಗರು, ಹರಿಹರ, ಮಲೆಬೆನ್ನೂರು ಹರಿಹರ ಗ್ರಾಮಾಂತರ ವೃತ್ತ ನಿರೀಕ್ಷಕರು, ಉಪ ನಿರೀಕ್ಷಕರು, ಭದ್ರಾ ನಾಲಾ ವಿಭಾಗದ ಇಂಜಿನಿಯರ್, ಬೆಸ್ಕಾಂ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಚನ್ನಗಿರಿ; ತಹಶೀಲ್ದಾರರು, ಉಪ ತಹಶೀಲ್ದಾರರು, ರಾಜಸ್ವ ನಿರೀಕ್ಷಕರು, ಗ್ರಾಮಲೆಕ್ಕಿಗರು, ಸಂತೇಬೆನ್ನೂರು, ಚನ್ನಗಿರಿ, ಬಸವಾಪಟ್ಟಣ ಠಾಣಾ ವೃತ್ತ ನಿರೀಕ್ಷಕರು, ಉಪ ನಿರೀಕ್ಷಕರು, ಭದ್ರಾ ನಾಲಾ ವಿಭಾಗದ ಇಂಜಿನಿಯರ್, ಬೆಸ್ಕಾಂ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳ ತಂಡಗಳನ್ನು ರಚನೆ ಮಾಡಿ ತಕ್ಷಣದಿಂದಲೇ ಕಾರ್ಯಾಚರಣೆ ಮಾಡಲು ಆದೇಶಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಬೈಕ್‌ಗಳ ಮುಖಾಮುಖಿ ಡಿಕ್ಕಿ ಇಬ್ಬರ ಸಾವು

» **ಹೊಸದುರ್ಗ**

ಎರಡು ಬೈಕ್ ಗಳ ನಡುವೆ ಮುಖಾ ಮುಖಿ ಡಿಕ್ಕಿ ಸಂಭವಿಸಿದ ಪರಿಣಾಮ ಇಬ್ಬರು ಬೈಕ್ ಸವಾರರು ಮೃತಪಟ್ಟಿರುವ ಘಟನೆ ತಾಲೂಕಿನ ಶ್ರೀರಾಂಪುರ ಹೋಬಳಿಯ ಎಸ್.ನೇರಲಕೆರೆ ಸಮೀಪ ಶುಕ್ರವಾರ ತಡರಾತ್ರಿ ನೆಡೆದಿದೆ. ಮೃತರನ್ನು ಎಸ್.ನೇರಲಕೆರೆ ಗ್ರಾಮದ ರಘು (25) ಹಾಗೂ ಕಾಳನಾಯ್ಕನಹಟ್ಟಿ ಗ್ರಾಮದ ಪ್ರದೀಪ (24) ಎಂದು ಗುರುತಿಸಲಾಗಿದೆ. ಎಸ್.ನೇರಲಕೆರೆ ಸಮೀಪದ ಸೈಯದ್ ಸಾಬ್ ಪಾಳ್ಯ ಕ್ರಾಸ್ ಬಳಿ ಎರಡು ಬೈಕ್ ಗಳ ನಡುವೆ ಮುಖಾ ಮುಖಿ ಡಿಕ್ಕಿ ಸಂಭವಿಸಿದೆ. ಎರಡೂ ದ್ವಿಚಕ್ರ ವಾಹನಗಳ ಸವಾರರು ತೀವ್ರವಾಗಿ ಗಾಯಗೊಂಡು ಚಿಕಿತ್ಸೆಗಾಗಿ ಹೊಸದುರ್ಗ ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿದೆ. ರಘು ಎಂಬುವವರು ಹೊಸದುರ್ಗ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೆ ಶುಕ್ರವಾರ ತಡರಾತ್ರಿ ಮೃತಪಟ್ಟರೆ, ಇನ್ನೊಬ್ಬ ಬೈಕ್ ಸವಾರ ಪ್ರದೀಪ ಎಂಬುವವರನ್ನು ಹೆಚ್ಚಿನ ಚಿಕಿತ್ಸೆಗೆ ಶಿವಮೊಗ್ಗ ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಕಾರಿಯಾಗದೆ ಶನಿವಾರ ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದ್ದು ಈ ಬಗ್ಗೆ ಶ್ರೀರಾಂಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಬದಾಮಿ

» **ಹೊಸದುರ್ಗ**



ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ನೂತನ ಅಧ್ಯಕ್ಷರಾಗಿ ಸಾಣೇಹಳ್ಳಿಯ ರಂಗ ನಿರ್ದೇಶಕರಾದ ವೈ ಡಿ ಬದಾಮಿ ಅವರನ್ನ ಆಯ್ಕೆ ಮಾಡಲಾಗಿದೆ ಎಂದು ಶರಣ ಸಾಹಿತ್ಯ ಪರಿಷತ್ತಿನ ರಾಜ್ಯ ಅಧ್ಯಕ್ಷರಾದ ಸೋಮಶೇಖರ್ ತಿಳಿಸಿದ್ದಾರೆ. ಚಿತ್ರದುರ್ಗದ ಬಾಪೂಜಿ ಸಭಾಂಗಣದಲ್ಲಿ ನಡೆದ ಪದಾಧಿಕಾರಿಗಳ ಸಭೆಯಲ್ಲಿ ವೈ ಡಿ ಬದಾಮಿ ಅವರನ್ನ ಆಯ್ಕೆ ಮಾಡಲಾಯಿತು. ಈ ಸಂಧರ್ಬದಲ್ಲಿ ಜಿಲ್ಲಾಧ್ಯಕ್ಷರಾದ ಕೆ.ಎಂ ವೀರೇಶ್ ಹಾಗೂ ಪರಿಷತ್ತಿನ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ

# ಬಿ.ಎನ್.ಚಂದ್ರಪ್ಪಗೆ ಅದ್ಧೂರಿ ಸ್ವಾಗತ

» **ಚಿತ್ರದುರ್ಗ**





ಸಂವಿಧಾನ ಉಳಿದು ಪ್ರತಿಯೊಬ್ಬರು ನೆಮ್ಮದಿಯಿಂದ ಬದುಕಬೇಕಾದರೆ ಈ ಬಾರಿಯ ಪಾರ್ಲಿಮೆಂಟ್ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ನನ್ನನ್ನು ಜಯಶಾಲಿಯನ್ನಾಗಿ ಮಾಡಿ ಎಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಮತದಾರರಲ್ಲಿ ಮನವಿ ಮಾಡಿದರು.

ಸೋಮವಾರ ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ 2014 ರಲ್ಲಿ ನಡೆದ ಪಾರ್ಲಿಮೆಂಟ್ ಚುನಾವಣೆಯಲ್ಲಿ ನಾನು ಸ್ಪರ್ಧಿಸಿದಾಗ ಚಿತ್ರದುರ್ಗ ಕ್ಷೇತ್ರದ ಜನ ನನ್ನ ಮೇಲೆ ವಿಶ್ವಾಸವಿಟ್ಟು ಗೆಲ್ಲಿಸಿ ಲೋಕಸಭೆಗೆ ಕಳಿಸಿಕೊಟ್ಟರು. ಐದು ವರ್ಷಗಳ ಕಾಲ ಮನೆಯ ಮಗನಾಗಿ ಕೆಲಸ ಮಾಡಿದ್ದೇನೆ. ಕ್ಷೇತ್ರದ ಮತದಾರರಿಗೆ ಎಲ್ಲಿಯೂ ಕಳಂಕ ತರಲಿಲ್ಲ. ಜಿಲ್ಲೆಯ ಜ್ವಲಂತ ಸಮಸ್ಯೆಗಳ ಕುರಿತು ಲೋಕಸಭೆಯಲ್ಲಿ 63 ಸಲ ಮಾತನಾಡಿದ್ದೇನೆ. 2019 ರಲ್ಲಿ ನಡೆದ ಚುನಾವಣೆಯಲ್ಲಿ ಸ್ಪರ್ಧಿಸಿ ಗೆದ್ದು ಹೋದ ಬಿಜೆಪಿ. ಅವರು ಏನು ಕೆಲಸ ಮಾಡಿದ್ದಾರೆನ್ನುವುದಕ್ಕೆ ಎಲ್ಲಿಯಾದರೂ ಸಾಕ್ಷಿಯಿದ್ದರೆ ತೋರಿಸಿ ಎಂದು ಕ್ಷೇತ್ರದ ಜನತೆಯನ್ನು ಪ್ರಶ್ನಿಸಿದರು.?

ಚಿತ್ರದುರ್ಗ ಲೋಕಸಭಾ ಕ್ಷೇತ್ರಾದ್ಯಂತ ನನ್ನ ಅವಧಿಯಲ್ಲಿ ಎಲ್ಲಾ ಕಡೆ ಶುದ್ದ ಕುಡಿಯುವ ನೀರಿನ ಘಟಕ, ಹೈಮಾಸ್ ದೀಪ, ಶಾಲಾ-ಕಾಲೇಜು, ಬಸ್‌ನಿಲ್ದಾಣಗಳನ್ನು ನಿರ್ಮಿಸಿದ್ದೇನೆ. ಹತ್ತು ವರ್ಷಗಳ ಕಾಲ ದೇಶದ ಪ್ರಧಾನಿಯಾಗಿದ್ದ ನರೇಂದ್ರಮೋದಿ ಜಾತಿ ಧರ್ಮಗಳನ್ನು ಎತ್ತಿ ಕಟ್ಟಿರುವುದನ್ನು ಬಿಟ್ಟರೆ ಅಭಿವೃದ್ದಿ ಶೂನ್ಯ. ಕೇಂದ್ರೀಯ ವಿದ್ಯಾಲಯ, ಮೆಡಿಕಲ್ ಕಾಲೇಜು, ಭದ್ರಾಮೇಲ್ದಂಡೆ ಯೋಜನೆಗೆ ಸಾಕಷ್ಟು ಹೋರಾಡಿದ್ದೇನೆ. ಡಬ್ಬಲ್ ಇಂಜಿನ್ ಸರ್ಕಾರದಲ್ಲಿ ಸಚಿವರಾಗಿದ್ದ ಎ.ನಾರಾಯಣಸ್ವಾಮಿರವರ ಕೊಡುಗೆ ಏನು? ಕಳೆದ ಚುನಾವಣೆಯಲ್ಲಿಯೂ ಜನ ನನಗೆ ಮತ ನೀಡಿದರು. ಆದರೆ ಇ.ವಿ.ಎಂ. ಏನು ನಿರ್ಣಯಿಸಿತೋ ಗೊತ್ತಿಲ್ಲ. ಎಂಟು ಕ್ಷೇತ್ರಗಳಲ್ಲಿಯೂ ಗೆದ್ದವರಿಗಿಂತ ನಾಲ್ಕು ಪಟ್ಟು ಹೆಚ್ಚು ಸುತ್ತಾಡಿದ್ದೇನೆ. ಬುದ್ದ, ಬಸವ, ಅಂಬೇಡ್ಕರ್, ಕನಕದಾಸರ ಆಶಯದಂತೆ ಸರ್ವ ಜನಾಂಗದ ಪ್ರೀತಿ ವಿಶ್ವಾಸ ಗಳಿಸಿದ್ದೇನೆ. ನಾನು ಮಾದಿಗ ಜನಾಂಗದಲ್ಲಿ ಹುಟ್ಟಿರಬಹುದು. ಸರ್ವ ಜನಾಂಗದ ಜೊತೆಯಲ್ಲಿದ್ದೇನೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರದಿಂದ ಅನೇಕ ಆಕಾಂಕ್ಷಿಗಳಿದ್ದರು. ಎಲ್ಲರನ್ನು ಬಿಟ್ಟು ನನಗೆ ಪಕ್ಷ ಟಿಕೇಟ್ ನೀಡಿದೆ ಎನ್ನುವ ಸೊಕ್ಕು ಇಲ್ಲ. ಮತ್ತೊಬ್ಬರ ಮೇಲೆ ಕೆಸರೆರೆಚುವ ಕೆಲಸ ಮಾಡಬಾರದು ಎಂದು ಆಕಾಂಕ್ಷಿಗಳಿಗೆ ಚುರುಕು ಮುಟ್ಟಿಸಿದ ಅಭ್ಯರ್ಥಿ ಬಿ.ಎನ್. ಚಂದ್ರಪ್ಪ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರ ಅಭಿಪ್ರಾಯದಂತೆ ವರಿಷ್ಟರು ನನ್ನನ್ನು ಉಮೇದುವಾರನನ್ನಾಗಿ ಮಾಡಿದ್ದಾರೆ. ದೇಶದಲ್ಲಿ ಜನ ನೆಮ್ಮದಿಯಾಗಿ ಇರಬೇಕಾಗಿರುವುದರಿಂದ ಕೇಂದ್ರದಲ್ಲಿ ಮತ್ತೆ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಬೇಕು ಎಂದು ಜನತೆಯಲ್ಲಿ ವಿನಂತಿಸಿದರು. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಕಾರ್ಯಾಧ್ಯಕ್ಷ ಕೆ.ಎಂ. ಹಾಲಸ್ವಾಮಿ, ಪ್ರಧಾನಕಾರ್ಯದರ್ಶಿಗಳಾದ ಕೆ.ಪಿ.ಸಂಪತ್‌ಕುಮಾರ್, ಡಿ.ಎನ್. ಮೈಲಾರಪ್ಪ, ಉಪಾಧ್ಯಕ್ಷ ರವಿಕುಮಾರ್, ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಸಂಘಟಿತ ಕಾರ್ಮಿಕ ವಿಭಾಗದ ಅಧ್ಯಕ್ಷ ಜಿ.ಎಸ್.ಮಂಜುನಾಥ್, ದ್ರಾಕ್ಷಾ ರಸ ಮಂಡಳಿ ಅಧ್ಯಕ್ಷ ಬಿ.ಯೋಗೇಶ್‌ಬಾಬು, ವಿಶ್ವಕರ್ಮ ವಿಭಾಗದ ಪ್ರಸನ್ನಕುಮಾರ್, ಚಿತ್ರದುರ್ಗ ನಗರಾಭಿವೃದ್ದಿ ಪ್ರಾಧಿಕಾರದ ಅಧ್ಯಕ್ಷ ಬಿ.ಟಿ.ಜಗದೀಶ್, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎನ್.ಡಿ.ಕುಮಾರ್. ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷ ಜಯಣ್ಣ, ಪರಿಶಿಷ್ಟ ಪಂಗಡ ವಿಭಾಗದ ಅಧ್ಯಕ್ಷ ಹೆಚ್. ಅಂಜಿನಪ್ಪ, ಮರುಳಾರಾಧ್ಯ, ಅಲ್ಲಾಭಕ್ಷಿ, ಟಿಪ್ಪುಖಾಸಿಂಆಲಿ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಶಶಿಕಲಾ, ಮಾಜಿ ಸದಸ್ಯರುಗಳಾದ ಆರ್.ನರಸಿಂಹಮೂರ್ತಿ, ಅನಂತ್, ಮುನಿರಾ ಎ.ಮಕಾಂದಾರ್, ಮೆಹಬೂಬ್ ಖಾತೂನ್, ಮೋಕ್ಷರುದ್ರಸ್ವಾಮಿ, ರೇಣುಕ, ಜಿಲ್ಲಾ ಕಾಂಗ್ರೆ ಕಿಸಾನ್ ಸೆಲ್ ವಿಭಾಗದ ಅಧ್ಯಕ್ಷ ನಾಗರಾಜ್, ಉಪಾಧ್ಯಕ್ಷ ಶಿವಲಿಂಗಪ್ಪ ಸೇರಿದಂತೆ ನೂರಾರು ಕಾರ್ಯಕರ್ತರು ಹಾಗೂ ಅಪಾರ ಅಭಿಮಾನಿಗಳು ಈ ಸಂದರ್ಭದಲ್ಲಿದ್ದರು.

**ಕಚೇರಿಗೆ ಸ್ವಾಗತ:** ಮುಂದಿನ ತಿಂಗಳು ನಡೆಯಲಿರುವ ಪಾರ್ಲಿಮೆಂಟ್ ಚುನಾವಣೆಯಲ್ಲಿ ಚಿತ್ರದುರ್ಗ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧೆಗಿಳಿದಿರುವ ಬಿ.ಎನ್.ಚಂದ್ರಪ್ಪ ಸೋಮವಾರ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿದಾಗ ಬೃಹಧಾಕಾರವಾದ ಹೂಮಾಲೆಯನ್ನು ಹಾಕಿ ಮುಖಂಡರು ಹಾಗೂ ಕಾರ್ಯಕರ್ತರು ಪ್ರೀತಿ ಅಭಿಮಾನ ತೋರಿಸಿ ಬರಮಾಡಿಕೊಂಡರು. ಕನಕಾಂಬರ, ಸುಗಂಧರಾಜ, ಹಸಿರುಪತ್ರೆ, ಗುಲಾಬಿ ಹೂಗಳಿಂದ ಕೂಡಿದ್ದ ಬೃಹಧಾಕಾರವಾದ ಹಾರವನ್ನು ಜೆ.ಸಿ.ಬಿ. ಸಹಾಯದಿಂದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪನವರಿಗೆ ಸಮರ್ಪಿಸಲಾಯಿತು.

ಮತ್ತೊಂದು ಜೆ.ಸಿ.ಬಿ.ಯಿಂದ ಕಾರ್ಯಕರ್ತರು ಚಂದ್ರಪ್ಪನವರ ಮೇಲೆ ಹೂಮಳೆ ಸುರಿಸಿದರು. ಕಾಂಗ್ರೆಸ್ ಕಚೇರಿ ಮೇಲೆ ನಿಂತಿದ್ದ ಕಾರ್ಯಕರ್ತರು ಹೂವಿನ ರಾಶಿ ಎರಚಿ ಸಂಭ್ರಮಿಸಿದರು, ಡೊಳ್ಳು, ತಮಟೆ ಸದ್ದಿಗೆ ಕಾರ್ಯಕರ್ತರು ಕೇಕೆ ಸಿಳ್ಳೆ ಹಾಕುತ್ತಿದ್ದುದನ್ನು ನೋಡಿದರೆ ಚುನಾವಣೆಯಲ್ಲಿ ಗೆದ್ದೆಬಿಟ್ಟಿದ್ದಾರೇನೋ ಎನ್ನುವ ವಾತಾವರಣ ಕಾಂಗ್ರೆಸ್ ಕಚೇರಿ ಎದುರು ನಿರ್ಮಾಣವಾಗಿತ್ತು.

ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರೊಡನೆ ಜೆ.ಸಿ.ಬಿ. ಮೇಲೆ ನಿಂತಿದ್ದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಕಾರ್ಯಕರ್ತರು, ಸಾರ್ವಜನಿಕರಿಗೆ ಕೈಮುಗಿದು ಕೃತಜ್ಞತೆಗಳನ್ನು ಸಲ್ಲಿಸಿದರು.




Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T